# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 92
Volume - 02 Issue - 92
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462
RNI No: KARKAN/2023/88462
ಚಿತ್ರದುರ್ಗ
Chitradurga
ದಿನಾಂಕ: 25–10–2024 ಶುಕ್ರವಾರ
Date: 25-10-2024 Friday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಕಾರ್ಯಕ್ಷೇತ್ರದಲ್ಲಿ ಮಾನಸಿಕ ಆರೋಗ್ಯಕ್ಕೆ ಆದ್ಯತೆ ನೀಡಿ: ನ್ಯಾ.ಎಂ.ವಿಜಯ್ 2

ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಲು ಜಿ.ಪಂ.ಸಿಇಓ ಕರೆ 3

ನೀರಾವರಿ ಪದ್ಧತಿಗಳ ಅಳವಡಿಕೆಯಿಂದ ನೀರಿನ ಸದ್ಬಳಕೆ: ರಜನೀಕಾಂತ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಆನಿವಾಳ ಶಾಲೆಯ ಕ್ರೀಡಾ ವಿದ್ಯಾರ್ಥಿ ಸಂತೋಷ್



» ಹೊಸದುರ್ಗ

ತಾಲೂಕಿನ ಆನಿವಾಳ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಹತ್ತನೇ ತರಗತಿಯ ವಿದ್ಯಾರ್ಥಿ ವಿದ್ಯಾರ್ಥಿ ಸಂತೋಷ್ ಈಚೆಗೆ ಚಿತ್ರದುರ್ಗದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕ್ರೀಡಾಕೂಟದಲ್ಲಿ ಭಾಗವಹಿಸಿ ತ್ರಿವಿಧ ಜಿಗಿತದಲ್ಲಿ ದ್ವಿತೀಯ ಸ್ಥಾನ ಹಾಗೂ ಉದ್ದ ಜಿಗಿತದಲ್ಲಿ ಚತುರ್ಥ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಕ್ರೀಡೆಯಲ್ಲಿ ವಿವಿಧ ತಾಲ್ಲೂಕುಗಳ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು, ರಾಜ್ಯಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿ ಸಂತೋಷ್‌ಗೆ ಶಾಲೆಯ ಮುಖ್ಯಶಿಕ್ಷ ನಟರಾಜ್, ಸಹಶಿಕ್ಷಕರಾದ ಚಂದ್ರಶೇಖರ್, ವೀರಭದ್ರಪ್ಪ, ಮಧು, ಮಂಜುನಾಥ, ಪ್ರಕಾಶ್, ಧೀರಜ್ ಹಾಗೂ ದೈಹಿಕ ಶಿಕ್ಷಕರಾದ ರವಿ,ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರು ಮತ್ತು ಸದಸ್ಯರು ಹಿರಿಯ ವಿದ್ಯಾರ್ಥಿ ಸಂಘ ಹಾಗೂ ಆನಿವಾಳ, ಹೊಸಕುಂದೂರು ಬಳ್ಳಕೆರೆ ಬುರುಡೆಕಟ್ಟೆ ಗ್ರಾಮಸ್ಥರುಗಳು ಅಭಿನಂದಿಸಿರುತ್ತಾರೆ.

### ಜಿಲ್ಲೆಯಲ್ಲಿ 664.91 ಹೆಕ್ಟೇರ್ ಕೃಷಿ ಬೆಳೆ ನಾಶ



» ಚಿತ್ರದುರ್ಗ

ಜಿಲ್ಲೆಯಲ್ಲಿ ಅಕ್ಟೋಬರ್ ಮಾಹೆಯಲ್ಲಿ ಬಿದ್ದಂತಹ ಹೆಚ್ಚಿನ ಮಳೆಯಿಂದಾಗಿ ಬೆಳೆಹಾನಿಯಾಗಿದ್ದು, ಜಿಲ್ಲೆಯಾದ್ಯಂತ 664.91 ಹೆಕ್ಟೇರ್‌ಗಳಷ್ಟು ಪ್ರದೇಶದಲ್ಲಿ ಬೆಳೆಹಾನಿಯಾಗಿರುವುದಾಗಿ ಸರ್ಕಾರಕ್ಕೆ ವರದಿ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ 2024–25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೃಷಿ ಬೆಳೆಗಳಾದ ಮೆಕ್ಕೆಜೋಳ–102397 ಹೆಕ್ಟೇರ್, ಶೇಂಗಾ–107013 ಹೆಕ್ಟೇರ್, ರಾಗಿ–44398 ಹೆಕ್ಟೇರ್, ಸಿರಿಧಾನ್ಯಗಳು–30486 ಹೆಕ್ಟೇರ್, ತೊಗರಿ–21024 ಹೆಕ್ಟೇರ್, ಹತ್ತಿ–8177 ಹೆಕ್ಟೇರ್ ಮತ್ತು ಇನ್ನಿತರೆ ಬೆಳೆಗಳನ್ನೊಳಗೊಂಡಂತೆ ಒಟ್ಟು 3,19,007 ಹೆಕ್ಟೇರ್ ಪ್ರದೇಶಲ್ಲಿ ಕೃಷಿ ಬೆಳೆಗಳ ಬಿತ್ತನೆಯಾಗಿದೆ. ಜಿಲ್ಲೆಯಾದ್ಯಂತ ಹಲವು ದಿನಗಳಿಂದ ಬಿದ್ದಂತಹ ಮಳೆಯಿಂದಾಗಿ ಜಿಲ್ಲೆಯಲ್ಲಿ ಶೇಂಗಾ–237.60 ಹೆಕ್ಟೇರ್, ಮೆಕ್ಕೆಜೋಳ–311.60 ಹೆಕ್ಟೇರ್, ತೊಗರಿ– 77.40 ಹೆಕ್ಟೇರ್, ಹತ್ತಿ–16.80 ಹೆಕ್ಟೇರ್, ರಾಗಿ– 10.40 ಹೆಕ್ಟೇರ್, ಸಜ್ಜೆ– 3.51 ಹೆಕ್ಟೇರ್, ಭತ್ತ – 1.60 ಹೆಕ್ಟೇರ್ ಹಾಗೂ ಇತರೆ ಬೆಳೆಗಳನ್ನೊಳಗೊಂಡಂತೆ ಒಟ್ಟಾರೆ 664.91 ಹೆಕ್ಟೇರ್‌ಗಳಷ್ಟು ಪ್ರದೇಶದಲ್ಲಿ ಬೆಳೆ ಹಾನಿಯಾದ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ ಎಂದು ಕೃಷಿ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅ.30 ವರೆಗೆ ಐಟಿಐ ಪ್ರವೇಶಾತಿ ಅವಧಿ ವಿಸ್ತರಣೆ

» ಚಿತ್ರದುರ್ಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಪ್ರವೇಶಾತಿಯನ್ನು ಅ.30ರ ವರೆಗೆ ವಿಸ್ತರಿಸಲಾಗಿದೆ. ಸಂಸ್ಥೆಯಲ್ಲಿ ವಿವಿಧ ವೃತ್ತಿಗಳಲ್ಲಿ ಉಳಿದ ಸ್ಥಾನಗಳಿಗೆ ಮೆರಿಟ್ ಆಧಾರದಲ್ಲಿ ಭರ್ತಿ ಮಾಡಿಕೊಳ್ಳಲಾಗುವುದು. ಅಭ್ಯರ್ಥಿಗಳು ಅ.30ರೊಳಗೆ ಅರ್ಜಿ ಸಲ್ಲಿಸಿ ಪ್ರವೇಶಾತಿ ಪಡೆದುಕೊಳ್ಳಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194–234515 ಅಥವಾ ಕಚೇರಿಗೆ ಸಂಪರ್ಕಿಸುವಂತೆ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಶುರಾಂಪುರದಲ್ಲಿ ಶೇಂಗಾ ರೈತರಿಗೆ ಕಣ್ಣೀರು ತರಿಸಿದ ಹವಮಾನ ವೈಪರಿತ್ಯ ಮಳೆ

» ಮಹದೇವಪುರ ಶಿವಮೂರ್ತಿ



ನಮ್ಮಜನ ವಿಶೇಷ



ಪರಶುರಾಂಪುರ: ಶೇಂಗಾ ಬೆಳೆ ಬಂದು ಹಿಂದಿನ ನಷ್ಟವನ್ನ ಸರಿದೂಗಿಸಿಕೊಳ್ಳುವ ನೀರೀಕ್ಷೆಯಲ್ಲಿದ್ದ ರೈತರಿಗೆ ವಾಯುಭಾರ ಕುಸಿತದಿಂದ ರಾಜ್ಯದೆಲ್ಲಡೆ ವರುಣನ ಆರ್ಭಟ ಮುಂದುವರಿದ್ದರಿಂದ ಕಟಾವಿನ ಸಮಯದಲ್ಲಿ ಬಿಟ್ಟುಬಿಡದಿರುವ ತುಂತುರ ಮಳೆಗೆ ಶೇಂಗಾ ಬೆಳೆಗಾರರು ಅಕ್ಷರಶ: ಸಂಕಷ್ಟಕ್ಕೆ ಸಿಲುಕಿದ್ದಾರೆ.

ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆಯಾಗಿದ್ದ,ಬಿತ್ತನೆ ಶೇಂಗಾ ಕಟಾವು ಮಾಡಿ ಶೇಂಗಾ ಕಾಯಿ ಜತೆಗೆ ಜಾನುವಾರುಗಳಿಗೆ ಮೇವು ಸಿಗದೇ ಬೆಳೆ ಹಾಳಾಗಿರುವ ಕಾರಣದಿಂದ ರಕ್ಷಣೆಯಲ್ಲಿದ್ದ ರೈತನಿಗೆ ಈಗ ಮೋಡ ಕವಿದ ವಾತವರಣದಿಂದ ರೈತರು ತಲೆ ಮೇಲೆ ಕೈಹೊತ್ತು ಕೂರುವಂತಾಗಿದೆ.

ಇನ್ನೇನು ಮಳೆ ಬಿಡುವು ನೀಡಿ ಬಿಸಿಲಿನ ವಾತಾವರಣ ಬಂತು ಎಂಬ ನಿರೀಕ್ಷೆ ಮಾಡಿದ ಬೆನ್ನ ಹಿಂದೆಯೇ ದಿನಬಿಟ್ಟು ದಿನ ಮಳೆ ಸುರಿಯುತ್ತಲೆ ಇದೆ.ಈ ತರಹದ ವರುಣನ ಕಣ್ಣಾಮುಚ್ಚಾಲೆ ಆಟ ಮುಂದುವರೆಯುತ್ತಲೆ ಇದೆ.

ಇದರಿಂದ ಶೇಂಗಾ ಕಟಾವು ಮಾಡಿದ ರೈತರ ಜಮೀನಿನಲ್ಲಿ ಬಳ್ಳಿ ಕೊಳೆತು ಹೋಗುವುದನ್ನ ಕಂಡು ಕಂಗಾಲುತ್ತಿದ್ದಾರೆ.

ಕಷ್ಟಪಟ್ಟು ದುಡಿದು ಫಸಲು ಕೈಸೇರುವ ಈ ವೇಳೆಗೆ ಇಂತಹ ಪರಿಸ್ಥಿತಿ ಎದುರಿಸುತ್ತಿರುವ ಬೆಳಗಾರರ ಪಾಡು,ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ. ತುಂತುರು ಮಳೆಗೆ ಶೇಂಗಾ ಕಟಾವು ಮಾಡಿ ಬಳ್ಳಿ ಸಂರಕ್ಷಣೆ ಮಾಡಲಾಗದೆ ಕೈಚೆಲ್ಲಿ ಕೂರುವ ಅನಿವಾರ್ಯ ಪರಿಸ್ಥಿತಿ ಬಯಲು ಸೀಮೆಯ ರೈತರು ಅನುಭವಿಸುತ್ತಿದ್ದಾರೆ.

ಶೇಂಗಾ ಬಿತ್ತನೆ ಮಾಡದೇ ಬಾರದು ಎಂದು ಅಂದುಕೊಳ್ಳುವುದು ಒಂದೆಡೆಯಾದರೇ,ಬಿತ್ತನೆ ಸಮಯದಲ್ಲಿ ಉತ್ತಮ ಮಳೆಯ ಶುಭ ಸೂಚನೆಯಿಂದಾಗಿ ಬಿತ್ತನೆ ಕಡೆ ಕಡೆ ಮುಖ ಮಾಡಿದ್ದರು. ಆದರೆ ಹೂಬಿಟ್ಟು ಕಾಯಿ ಕಟ್ಟುವ ಕಾಲಕ್ಕೆ ಮಳೆ ಕೈಕೊಟ್ಟು ಇಳುವರಿ ಕುಂಠಿತವಾಗುವ ಆತಂಕದಲ್ಲಿದ್ದವರು ಜಾನುವಾರಗಳಿಗೆ ಮೇವಿಗಾದರೂ ಪ್ರತಿವರ್ಷ ಬಿತ್ತನೆ ಮಾಡುವವರಿಗೆ ಅಕಾಲಿಕ ಮಳೆ ಬಳ್ಳಿಯನ್ನೂ ಸಹಾ ಒಣಗಲು ಬಿಡದೆ ಸುರಿಯುತ್ತಿರುವ ಮಳೆಗೆ ದಿಕ್ಕು ತೋಚದಂತೆ ಕೈಕಟ್ಟಿ ಕುಳಿತಿದ್ದಾರೆ.

ಬಳ್ಳಿಯಲ್ಲಿ ತೇವಾಂಶ ಹೆಚ್ಚಾಗಿ ಸದ್ಯ ಜಮೀನಿನಲ್ಲಿರುವ ಶೇಂಗಾ ಕಟಾವು ಬಳ್ಳಿಯಲ್ಲಿ ಮೊಳಕೆಯೊಡೆಯುವ ಹಂತಕ್ಕೆ ತಲುಪಿದ್ದು ಶೇಂಗಾ ಬೆಳೆಗಾರರು ನೆಮ್ಮದಿ ಕಸಿದಿದೆ. ಮೊದಲು ಕಟಾವು ಆರಂಭಿಸಿದ್ದವರು ಬಿಸಿಲು ಇಲ್ಲದೇ ಮೋಡ ಕವಿದ ಅದರ ಜತೆಯಲ್ಲಿ ಬೀಳುವ ಮಳೆಯಿಂದಬಳ್ಳಿನೆನೆದುಸಂಪೂರ್ಣವಾಗಿ ಹಾಳಾಗಿದ್ದು,ಜಾನುವಾರುಗಳಿಗೆ ಮೇವಿಲ್ಲದಾಗಿಸಿದ ಹವಮಾನ ವೈಪರಿತ್ಯದ ಮಳೆ ಎಂಬುದು ರೈತರ ಅಳಲು.

ಕಟಾವು ಶೇಂಗಾ ಬಳ್ಳಿ ಒಣಗಲು ಹೊಲದಲ್ಲಿಯೇ ಬಿಟ್ಟಿರುವ ರೈತರ ಪಾಡು ಹೇಳತೀರದಾಗಿದೆ. ಮಳೆಗೆ ನೆನೆದು ಕಪ್ಪು ಬಣ್ಣ ತಿರುಗಿ ಇಳುವರಿ ಕಡಿಮೆಯಾಗುವುದರ ಜತೆಗೆ ಬೆಳೆ ದರ ಕಡಿಮೆ ಯಾಗುವ ಸಂಕಷ್ಟಕ್ಕೆ ಸಿಲುಕಿ ಅನ್ನದಾತನಿಗೆ ಮತ್ತೊಷ್ಟು ಆರ್ಥಿಕ ಸಂಕಷ್ಟಕ್ಕೇ ಸಿಲುಕುತ್ತಿದ್ದಾನೆ.

### ವೈಭವಯುತವಾಗಿ ಕನ್ನಡ ರಾಜ್ಯೋತ್ಸವ ಆಚರಿಸಲು ತೀರ್ಮಾನ

## ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದಂತಹ 10 ಮಂದಿ ಪ್ರತಿಭಾನ್ವಿತರಿಗೆ ತಾಲೂಕು ಮಟ್ಟದ ರಾಜ್ಯೋತ್ಸವ ಪ್ರಶಸ್ತಿ

» ಹೊಸದುರ್ಗ

ನವಂಬರ್ 1 ರಂದು ಪಟ್ಟಣದ ಸರ್ಕಾರಿ ಪಿ.ಯು ಕಾಲೇಜು ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನ ಅಚ್ಚುಕಟ್ಟಾಗಿ ಮತ್ತು ವೈಭವಯುತವಾಗಿ ಆಚರಿಸುವ ಸಲುವಾಗಿ ಈಗಾಗಲೆ ಅನೇಕ ಸಿದ್ದತೆಗಳನ್ನ ಮಾಡಿಕೊಳ್ಳಲಾಗಿದೆ ಎಂದು ತಹಶಿಲ್ದಾರ್ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಅದ್ಯಕ್ಷರಾದ ತಿರುಪತಿಪಾಟೀಲ್ ತಿಳಿಸಿದರು. ನವಂಬರ್ 1 ರಂದು ನಡೆಯಲಿರುವ ಕನ್ನಡ



ರಾಜ್ಯೋತ್ಸವ ಕಾರ್ಯಕ್ರಮದ ಕಛೇರಿಯಲಿ ಕರೆಯಲಾಗಿದ್ದ ಅಂಗವಾಗಿ ಪಟ್ಟಣದ ತಾಲೂಕು ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮ ಅಚ್ಚು ಕಟಾಗಿ ನಡೆಯುವ ನಿಟ್ಟಿನಲ್ಲಿ ನಮ್ಮ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಒಂದೊಂದು ಜವಾಬ್ದಾರಿಯನ್ನ ನೀಡಲಾಗಿದೆ, ವೇದಿಕೆ ಸಿದ್ದತೆ, ದ್ವಜ ಕಂಬ ಮತ್ತಿತರೆ ಅಗತ್ಯವಿರುವ ಎಲ್ಲಾ ಸಿದ್ದತೆ ಮಾಡಿಕೊಳ್ಳಲು ಸೂಚಿಸಲಾಗಿದ್ದು ವಿಶೇಷವಾಗಿ ಕನ್ನಡ ಮಾಧ್ಯಮದಲ್ಲಿ ಅತೀ ಹೆಚ್ಚು ಅಂಕಗಳನ್ನ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಗುವುದು.


ಪುಟ 2


## ಯುವಕರಿಗೆ, ಅಂಗಡಿ ಮಾಲೀಕರಿಗೆ ಕೋಟ್ಪಾ ಕಾಯ್ದೆ ಜಾಗೃತಿ



ಚಿತ್ರದುರ್ಗ: ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ತಂಬಾಕು ಮುಕ್ತ ಯುವ ಅಭಿಯಾನ 2.0 ಅಂಗವಾಗಿ ಯುವಕರಿಗೆ ಮತ್ತು ಅಂಗಡಿಗಳ ಮಾಲೀಕರಿಗೆ ಕೋಟ್ಪಾ–2003ರ ಕಾಯ್ದೆಯ ತಂಬಾಕು ಕಾರ್ಯಾಚರಣೆ ಜಾಗೃತಿ ಮೂಡಿಸಲಾಯಿತು. ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಪಟ್ಟಣ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ, ಯುವಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ ತಂಬಾಕು ಕಾರ್ಯಾಚರಣೆ ಮಾಡಿ ಜಾಗೃತಿ ಮೂಡಿಸಲಾಯಿತು.

### ಪ್ರಮುಖ ಸುದ್ದಿ

# ತುಂಬಿ ಹರಿದ ಕರೇಕಲ್ ಕೆರೆ: ಕೋಡಿ ನೀರು ಸರಾಗವಾಗಿ ಹರಿಯಲು ಡೆಕ್ ನಿರ್ಮಾಣ ಮಾಡಿ: ಶಾಸಕ ರಘುಮೂರ್ತಿ

» ಚಳ್ಳಕೆರೆ





ಕಳೆದ ಸುಮಾರು 60 ವರ್ಷಗಳ ನಂತರ ನಗರದ ನಾಯಕನಹಟ್ಟಿ ರಸ್ತೆಯ ಕರೇಕಲ್ ಕೆರೆ ತುಂಬಿದ್ದು, ಏರಿಯಲ್ಲಿ ಕಾಣಿಸಿಕೊಂಡ ರಂಧ್ರಗಳಿಂದ ಅಪಾಯದ ಮುನ್ಸೂಚನೆ ಹಿನ್ನೆಲೆಯಲ್ಲಿ ಕೋಡಿಪ್ರದೇಶವನ್ನು ಮೂರು ಅಡಿ ಅಗೆದು ಕೆರೆ ನೀರನ್ನು ಹೊರಬಿಟ್ಟಿದ್ದು, ಪ್ರಸ್ತುತ ವಾಸ್ತವ ಪರಿಸ್ಥಿತಿಯನ್ನು ಅವಲೋಕಿಸಲು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರಾರಂಭದಲ್ಲಿ ಎರಡು ರಂಧ್ರ ಕಾಣಿಸಿಕೊಂಡ ಸ್ಥಳವನ್ನು ವೀಕ್ಷಿಸಿದ ಶಾಸಕರು, ರಂಧ್ರದ ಮೂಲಕ ನೀರು ಹರಿಯುವುದನ್ನು ತಡೆಯುವಂತೆ ಸಣ್ಣನೀರಾವರಿ ಇಲಾಖೆ ಇಂಜಿನಿಯರ್ ಅಣ್ಣಪ್ಪನವರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಮಾಹಿತಿ ನೀಡಿದ ಅಣ್ಣಪ್ಪ ಎರಡೂ ರಂಧ್ರಗಳನ್ನು ಏಕಕಾಲದಲ್ಲಿ ಮುಚ್ಚಲು ಸಾಧ್ಯವಾಗದು ಹಾಗಾಗಿ ಒಳಭಾಗದಿಂದ ರಂಧ್ರವನ್ನು ಮುಚ್ಚಿಸುವ ಭರವಸೆ ನೀಡಿದರು.

ನಂತರ ಕೋಡಿ ಹರಿಯುವ ಜಾಗವನ್ನು ಪರಿಶೀಲಿಸಿದ ಶಾಸಕರು ಸಕಾಲದಲ್ಲಿ ಅಧಿಕಾರಿಗಳು ತುರ್ತುಕ್ರಮ ಕೈಗೊಂಡ ಹಿನ್ನೆಲೆಯಲ್ಲಿ ಕೆರೆ ಏರಿಗೆ ಯಾವುದೇ ಅಪಾಯವಾಗಿಲ್ಲ. ಆದರೂ ಮುಂದಿನ ದಿನಗಳಲ್ಲಿ ಮತ್ತೆ ಇಂತಹ ಪರಿಸ್ಥಿತಿ ಎದುರಾಗಬಾರದು. ಆದ್ದರಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕಿದೆ. ಸಣ್ಣ ನೀರಾವರಿ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಿ ಇಂಜಿನಿಯರನ್ನು ಸಂಪರ್ಕಿಸಿ ಕೋಡಿನೀರು ಹರಿಯುವ ಜಾಗದಲ್ಲಿ ವಿಸ್ತಾರವಾದ ಡೆಕ್ ನಿರ್ಮಿಸುವಂತೆ ಸೂಚಿಸಿದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಡೆಕ್ ನಿರ್ಮಾಣದ ಬಗ್ಗೆ ಯೋಜನೆ ಸಿದ್ದಪಡಿಸಿ ಮಂಜೂರಾತಿಗೆ ಕಳಿಸುವಂತೆ ಸೂಚಿಸಿದರು.

ತಹಶೀಲ್ದಾರ್ ರೇಹಾನ್‌ಪಾಷ ಮಾಹಿತಿ ನೀಡಿ, ಸುದ್ದಿತಿಳಿದ ಕೂಡಲೇ ಪೌರಾಯುಕ್ತ ಜಗರೆಡ್ಡಿ ಸೇರಿದಂತೆ ಎಲ್ಲಾ ಅಧಿಕಾರಿಗಳು ಸ್ಥಳಕ್ಕೆ ದಾವಿಸಿ ಕೋಡಿಯನ್ನು ಒಡೆದು ಹಾಕಿ ಹೆಚ್ಚುವರಿ ನೀರು ಹೊರಬಿಡಲಾಗಿದೆ. ಸದ್ಯದ ಸ್ಥಿತಿಯಲ್ಲಿ ಯಾವುದೇ ಅಪಾಯ ಉಂಟಾಗದು. ಆದರೂ ನಗರಸಭೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ತಿಳಿಸಿದೆ ಎಂದರು.

ನಗರಸಭಾ ಸದಸ್ಯ ಟಿ.ಮಲ್ಲಿಕಾರ್ಜುನ್, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ, ನಗರಸಭೆ ಎಇಇ ಕೆ.ವಿನಯ್, ಇಂಜಿನಿಯರ್ ರವಿಕುಮಾರ್, ಚೇತನ್, ಮುಖಂಡರಾದ ಗುಜ್ಜಾರಪ್ಪ, ವೀರೇಶ್, ಅಂಜಿನಪ್ಪ, ಷಣ್ಮುಖಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### 10 ಮಂದಿ ಪ್ರತಿಭಾನ್ವಿತರಿಗೆ ತಾಲೂಕು ಮಟ್ಟದ ರಾಜ್ಯೋತ್ಸವ ಪ್ರಶಸ್ತಿ

» ಮೊದಲ ಪುಟದಿಂದ

ಕನ್ನಡ ನಾಡು, ನುಡಿ. ಸಾಹಿತ್ಯ, ಸಂಸ್ಕೃತಿ, ಕಲೆ, ವಾಸ್ತುಶಿಲ್ಪ, ಚಿತ್ರಕಲೆ ಈಗೆ ಮತ್ತಿತರೆ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದಂತಹ 10 ಮಂದಿ ಪ್ರತಿಭಾನ್ವಿತರಿಗೆ ತಾಲೂಕು ಮಟ್ಟದ ರಾಜ್ಯೋತ್ಸವ ಪ್ರಶಸ್ತಿಯನ್ನ ನೀಡಿ ಸನ್ಮಾನಿಸಿ ಗೌರವಿಸಲಾಗುವುದು ಕಾರ್ಯಕ್ರಮದ ದಿನ ತಾಲೂಕು ಮಟ್ಟದ ಎಲ್ಲಾ ಇಲಾಖೆಯಾಎಲ್ಲಾತಾಲೂಕುಮಟ್ಟದಅಧಿಕಾರಿಗಳು ಮರವಣಿಗೆಯಿಂದ ಹಿಡಿದು ಕಾರ್ಯಕ್ರಮ ಕೊನೆಗೊಳ್ಳುವರೆಗೂ ಸಹಾ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು ಯಾರೂ ಕೂಡ ಕಾರ್ಯಕ್ರಮಕ್ಕೆ ಗೈರು ಹಾಜುರಾಗುವಂತಿಲ್ಲ ಎಂಬ ಸೂಚನೆ ನೀಡಲಾಗಿದೆ ಎಂದರು.

ಇನ್ನುಳಿದಂತೆ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ ಪಟ್ಟಣದ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಪಟ್ಟಣದ ಪ್ರಮುಖ ರಸ್ತೆಯಲ್ಲಿ ತಾಯಿ ಭುವನೇಶ್ವರಿಯ ಭಾವಚಿತ್ರ ಹಾಗೂ ಜ್ಞಾನ ಪೀಠ ಪುರಸ್ಕೃತರ ಭಾವಚಿತ್ರದ ಮೆರವಣಿಗೆಯನ್ನ ವ್ಯವಸ್ಥಿತವಾಗಿ ಸಜ್ಜುಗೊಳಿಸಲಾಗುವುದು. ಜಾನಪದ ಕಲಾತಂಡದೊಂದಿಗೆ ಮರವಣಿಗೆ ಅರಂಭಗೊಳ್ಳಲಿದೆ ಎಂದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಇ.ಓ ಸುನಿಲ್‌ಕುಮಾರ್, ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ತಾಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಮಾಜಿ ಕಾರ್ಯದರ್ಶಿಗಳಾದ ನಾಗತಿಹಳ್ಳಿಮಂಜುನಾಥ್, ಡಿ.ಟಿ.ಚಂದ್ರಶೇಖರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ನೀರು ಕುದಿಸಿ, ಆರಿಸಿ ಕುಡಿಯಲು ಸಲಹೆ

» ದಾವಣಗೆರೆ

ಕವಲೆತ್ತು ಗ್ರಾಮದ ಹತ್ತಿರ ತುಂಗಭದ್ರ ನದಿಯ ನೀರಿನ ಹರಿವು ಹೆಚ್ಚಾಗಿರುವುದರಿಂದ ನದಿಯ ನೀರಿನಲ್ಲಿ ಕೆಸರು ಮಿಶ್ರಿತವಾಗಿರುತ್ತದೆ. ನದಿಯಿಂದ ಹರಿಹರ ನಗರಕ್ಕೆ ನೀರು ಪೂರೈಸುತ್ತಿರುವ ಕಾರಣ ಸಾರ್ವಜನಿಕರು ನೀರನ್ನು ನೇರವಾಗಿ ಕುಡಿಯದೇ, ಕುದಿಸಿ, ಆರಿಸಿದ ನಂತರ ನೀರನ್ನು ಕುಡಿಯಬೇಕೆಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

### ದೊಡ್ಡ ಉಳ್ಳಾರ್ತಿ ಹಾಲು ಒಕ್ಕೂಟಕ್ಕೆ ಶಿಮುಲ್‌ನಿಂದ 1.50 ಲಕ್ಷ ಚೆಕ್ ವಿತರಣೆ

» ಚಳ್ಳಕೆರೆ

ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ಹಾಲುಒಕ್ಕೂಟ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕಾಗಿ ಶಿವಮೊಗ್ಗ ಹಾಲುಒಕ್ಕೂಟದ ಅನುದಾನದಲ್ಲಿ 1.50 ಲಕ್ಷ ಚೆಕನ್ನು ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಅಧ್ಯಕ್ಷ 'ಣ್ಣತಿಮ್ಮಣ್ಣನವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಾಲು ಒಕ್ಕೂಟ ಸಹಕಾರ ಸಂಘ ಸ್ವಂತ ಕಟ್ಟಡ ನಿರ್ಮಾಣಕ್ಕೆ ಮುಂದಾಗಿರುವುದು ಉತ್ತಮ ಬೆಳವಣಿಗೆಯಾಗಿದೆ. ಕಳೆದ ಹಲವಾರು ವರ್ಷಗಳಿಂದ ದೊಡ್ಡ ಉಳ್ಳಾರ್ತಿ ಗ್ರಾಮದಿಂದ ಹೆಚ್ಚಿನ ಪ್ರಮಾಣದ ಹಾಲು ಪ್ರತಿನಿತ್ಯ ಹಾಲು ಸಂಗ್ರಹಣ ಘಟಕಕ್ಕೆ ಶೇಖರಣೆಯಾಗುತ್ತಿದೆ. ಹಾಲುಒಕ್ಕೂಟ ಸಹಕಾರ ಸಂಘಗಳು ಉತ್ತಮ ವ್ಯವಹಾರವನ್ನು ನಡೆಸುವ ಮೂಲಕ ಹಾಲು ಒಕ್ಕೂಟವನ್ನು ಅಭಿವೃದ್ಧಿ ಪಡಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಕಟ್ಟಡದ ಕಾಮಗಾರಿಯನ್ನು ಸಹ ವೀಕ್ಷಿಸಿದರು. ಮಾರ್ಗವಿಸ್ತರಣಾಧಿಕಾರಿ ನಯಾಜ್‌ಬೇಗ್, ಕಾರ್ಯದರ್ಶಿ ಕೆ.ರಾಜೇಶ್ವರಿ, ಉಪಾಧ್ಯಕ್ಷ ಗೋವಿಂದರೆಡ್ಡಿ, ಶ್ರೀನಿವಾಸ್‌ರೆಡ್ಡಿ, ಓಂಕಾರಪ್ಪ,ಈ.ನಾಗರಾಜ,ಲಕ್ಷ್ಮಿದೇವಿ,ಶಿವಲಿಂಗಪ್ಪ, ಲೋಕೇಶ್, ನಾಗವೇಣಿ, ನಾಗರಾಜರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

### 'ಮತ್ಸ್ಯವಾಹಿನಿ' ಇ-ತ್ರಿಚಕ್ರ ವಾಹನ ಪರವಾನಿಗೆಗಾಗಿ ಅರ್ಜಿ ಆಹ್ವಾನ

» ಚಿತ್ರದುರ್ಗ

ಮೀನುಗಾರಿಕೆ ಇಲಾಖೆ ವತಿಯಿಂದ 2023–24ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಸ್ಥಳೀಯವಾಗಿ ಮೀನು ಸೇವೆ ಪ್ರೋತ್ಸಾಹಿಸಲು ಪರಿಸರ ಸ್ನೇಹಿ ಸುಸಜ್ಜಿತ ಕಿಯೋಸ್ಕ್ ಮಾದರಿ ಇ–ತ್ರಿಚಕ್ರ ವಾಹನಗಳಲ್ಲಿ ತಾಜಾ ಮೀನು ಉತ್ಪನ್ನ ಮಾರಾಟಕ್ಕಾಗಿ ಸಾರ್ವಜನಿಕ ಸಹಭಾಗಿತ್ವದ ಮೂಲಕ, ಇ–ವಾಹನಗಳನ್ನು ಪರವಾನಿಗೆ ಆಧಾರದಲ್ಲಿ ಪಡೆಯಲು ಮೀನುಗಾರಿಕೆಯಲ್ಲಿ ತೊಡಗಿರುವ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ನ.04 ಅರ್ಜಿ ಸಲ್ಲಿಸಲು ಕೊನೆಯ ದಿನ. ಚಿತ್ರದುರ್ಗ ಜಿಲ್ಲೆಗೆ 3 ಭೌತಿಕ ಗುರಿ ನಿಗದಿಪಡಿಸಲಾಗಿದ್ದು, ಸಾಮಾನ್ಯ ವರ್ಗದವರಿಗೆ ಭದ್ರತಾ ಠೇವಣಿ ಮೊತ್ತ ರೂ.1 ಲಕ್ಷ, ಪರಿಶಿಷ್ಟ ಜಾತಿ, ಪಂಗಡ ಮಹಿಳೆಯರಿಗೆರೂ.0.50ಲಕ್ಷನಿಗದಿಪಡಿಸಲಾಗಿದೆ. ಪರವಾನಗಿದಾರರು ಮಾಹೆಯಾನ ರೂ.3000/ ಮಾಸಿಕ ಶುಲ್ಕ ಭರಿಸಬೇಕಾಗುತ್ತದೆ. ಆಸಕ್ತರು ನವೆಂಬರ್ 4ರ ಒಳಗಾಗಿ ಅರ್ಜಿ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ, ಹೊಸದುರ್ಗ, ಹಿರಿಯೂರು, ಚಳ್ಳಕೆರೆ ಮತ್ತು ಮೊಳಕಾಲ್ಮೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು

---

ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಮತ್ತು ಮಾನಸಿಕ ಯೋಗಕ್ಷೇಮ ಜಾಗೃತಿ ಕಾರ್ಯಾಗಾರ

# ಕಾರ್ಯಕ್ಷೇತ್ರದಲ್ಲಿ ಮಾನಸಿಕ ಆರೋಗ್ಯಕ್ಕೆ ಆದ್ಯತೆ ನೀಡಿ: ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್

» ಚಿತ್ರದುರ್ಗ

ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಆರೋಗ್ಯವೂ ಮುಖ್ಯವಾಗಿದ್ದು, ಪೊಲೀಸರು ಕಾರ್ಯಕ್ಷೇತ್ರದಲ್ಲಿ ಮಾನಸಿಕ ಆರೋಗ್ಯ ಸ್ವಾಸ್ಥ್ಯಕ್ಕೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಪೊಲೀಸ್ ಇಲಾಖೆ, ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯವರ ಸಂಯುಕ್ತಾಶ್ರಯದಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಮತ್ತು ಮಾನಸಿಕ ಯೋಗಕ್ಷೇಮ ಜಾಗೃತಿ ಕಾರ್ಯಾಗಾರ" ಉದ್ಘಾಟಿಸಿ ಅವರು ಮಾತನಾಡಿದರು.





ಪೊಲೀಸರು ಸಾರ್ವಜನಿಕರೊಂದಿಗೆ ಸಾಕಷ್ಟುಸಂಪರ್ಕದಲ್ಲಿರುವುದರಿಂದವಿವಿಧ ಬಗೆಯ ಮನಸ್ಥಿತಿಯಲ್ಲಿರುವ ಜನರು ಬರುತ್ತಾರೆ. ಮಾನಸಿಕ ಸಮತೋಲನ ಇಲ್ಲದೆ ಕೆಲಸ ಮಾಡಲು ಹೋದರೆ ಅನೇಕ ತೊಂದರೆಗಳು ಎದುರಾಗಲಿವೆ. ಹಾಗಾಗಿ ಕಾರ್ಯಕ್ಷೇತ್ರದಲ್ಲಿ ಮಾನಸಿಕ ಆರೋಗ್ಯಕ್ಕೆ ಕೂಡ ಆದ್ಯತೆ ನೀಡಬೇಕು ಎಂದರು.

ಪೊಲೀಸರು ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಸಮತೋಲನ, ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಉತ್ತಮ ಸೇವೆ ಸಲ್ಲಿಸಿ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಮಾತನಾಡಿ, ಪೊಲೀಸ್‌ಇಲಾಖೆಯಲ್ಲಿಸಹಜವಾಗಿಯೇ ಕೆಲಸದ ಒತ್ತಡ ಹೆಚ್ಚಿರುತ್ತದೆ. ಪೊಲೀಸರು ಮಾನಸಿಕವಾಗಿ ಸದೃಢವಾಗಿರುತ್ತಾರೆ. ಆದರೆ ಪ್ರತಿನಿತ್ಯವೂ ಒತ್ತಡದಲ್ಲಿ ಕಾರ್ಯನಿರ್ವಹಿಸುವುದರಿಂದ ಇಂತಹ ಒತ್ತಡಗಳಿಗೆ ಮಣಿದು ದುಶ್ಚಟಗಳಿಗೆ ಬಲಿಯಾಗಬಾರದು ಎಂದು ತಿಳಿಸಿದ ಅವರು, ಸಾಮಾಜಿಕ ಜಾಲತಾಣಗಳಲ್ಲಿ ಮುಳುಗಿ ಕಾಲಹರಣ ಮಾಡದೇ, ತಮಗೆ ಆಸಕ್ತಿ ಇರುವ ಹವ್ಯಾಸಗಳಲ್ಲಿ ತೊಡಗಿಸಿಕೊಳ್ಳಬೇಕು. ಯೋಗ, ಧ್ಯಾನ, ಪ್ರಾಣಾಯಾಮ ಸೇರಿದಂತೆ ಉತ್ತಮ ಹವ್ಯಾಸಗಳಿಂದ ಮಾನಸಿಕ ಒತ್ತಡ ಕಡಿಮೆಯಾಗುವುದು. ಈ ಹಿನ್ನಲೆಯಲ್ಲಿ ಪೊಲೀಸರು ಉತ್ತಮ ಆರೋಗ್ಯ ಜೀವನ ಶೈಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಮಾತನಾಡಿ, ಆರೋಗ್ಯವೇಭಾಗ್ಯಎಂಬವೇದವಾಕ್ಯದಂತೆ, ದೈಹಿಕವಾಗಿ ಸದೃಢವಾಗಿರುವುದಲ್ಲದೇ ಮಾನಸಿಕವಾಗಿಯೂ ಸದೃಢರಾಗಿರಬೇಕು. ದ್ವೇಷ, ಅಸೂಯೆ, ಹೊಟ್ಟೆಕಿಚ್ಚು ಮತ್ತೊಬ್ಬರಿಗೆ ತೊಂದರೆ ನೀಡಿ ಸಂತೋಷ ಪಡುವುದನ್ನು ಬಿಡಬೇಕು ಎಂದು ತಿಳಿಸಿದ ಅವರು, ನಮ್ಮ ಇತಿ–ಮಿತಿಯಲ್ಲಿ ಜೀವನ ರೂಪಿಸಿಕೊಂಡಾಗ ಮಾತ್ರ ಮಾನಸಿಕವಾಗಿ ನೆಮ್ಮದಿಯಿಂದರಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ಉಪ ಪ್ರಧಾನ ಕಾನೂನು ಅಭಿರಕ್ಷಕ ಎಂ.ಮೂರ್ತಿ ಅವರು "ಮಾನಸಿಕ ಆರೋಗ್ಯ ಆರೈಕೆ ಕಾಯ್ದೆ–2017" ಕುರಿತು ಹಾಗೂ ಜಿಲ್ಲಾಸ್ಪತ್ರೆ ಮನೋವೈದ್ಯ ಡಾ.ಆರ್.ಮಂಜುನಾಥ್ ಅವರು "ಕಾರ್ಯಕ್ಷೇತ್ರದಲ್ಲಿ ಮಾನಸಿಕ ಒತ್ತಡ ನಿರ್ವಹಣೆ" ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಶಸ್ತ್ರ ಮೀಸಲು ಪಡೆ ಪೊಲೀಸ್ ಉಪ ಅಧೀಕ್ಷಕ ಎಸ್. ಎಸ್. ಗಣೇಶ್, ಚಿತ್ರದುರ್ಗ ಉಪ ವಿಭಾಗದ ಉಪ ಅಧೀಕ್ಷಕ ಪಿ.ಕೆ.ದಿನಕರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಡಿ.ಎಂ.ಅಭಿನವ್, ಜಿಲ್ಲಾ ಮಾನಸಿಕ ಕಾರ್ಯಕ್ರಮ ಆರೋಗ್ಯ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಸೇರಿದಂತೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

---

# ಫ್ಲೋರೋಸಿಸ್ ಬಗ್ಗೆ ತಿಳಿದು ಎಚ್ಚರವಾಗುತ್ತಾ, ತಡೆಗೆ ಕೈ ಜೋಡಿಸೋಣ: ಬಿ.ಆನಂದ ಕುಮಾರ್

» ಪರಶುರಾಂಪುರ

ಕುಡಿಯುವ ನೀರು ಹಾಗೂ ಆಹಾರದಿಂದ ಫ್ಲೋರೋಸಿಸ್ ಕಾಯಿಲೆ ಬರುವುದರಿಂದ ಅದರ ತಡೆ ಬಗ್ಗೆ ಪ್ರತಿಯೊಬ್ಬರು ತಿಳಿದು,ಎಲ್ಲರೂ ಕೈಜೋಡಿಸುತ್ತಾ, ಸಾರ್ವಜನಿಕರಲ್ಲಿ ಈ ಬಗ್ಗೆ ಜಾಗೃತರಾಗಿಸೋಣ ಎಂದು ಗ್ರಾಪಂ ಅಧ್ಯಕ್ಷ ಬಿ.ಆನಂದ ಕುಮಾರ್ ತಿಳಿಸಿದರು.

ಸಮೀಪದ ದ್ಯಾವರನಹಳ್ಳಿಯ ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾ,ತಾಲೂಕು,ಜಿಲ್ಲಾಡಳಿತ ,ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಫ್ಲೋರೋಸಿಸ್ ತಡೆ ಹಾಗೂ ನಿಯಂತ್ರಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಯಸ್ಸಿನ ಅಂತರ,ಲಿಂಗಬೇದವಿಲ್ಲದ ಚಿಕ ್ಕಮಕ್ಕಳು,ವಯಸ್ಕರ,ಮಹಿಳೆಯರು,ಪುರಷರು ಎಲ್ಲರಲ್ಲಿಯೂ ಕಾಣುವದರಿಂದ ಫ್ಲೋರೋಸಿಸ್ ನಿಯಂತ್ರಣಕ್ಕೆ ಮುಂದಾಗೋಣ ಎಂದರು.

ಜಿಲ್ಲಾಫ್ಲೋರೋಸಿಸ್‌ಸಲಹೆಗಾರಡಾ.ರಾಕೇಶ್ ಮತನಾಡಿ,ದಿನನಿತ್ಯ ಸೇವಿಸುವ ನೀರನಲ್ಲಿ



ಅಗತ್ಯಕ್ಕಿಂತ ಫ್ಲೋರೈಡ್ ಅಂಶ ಅಧಿಕವಾಗಿದ್ದರೆ ಫ್ಲೋರೋಸಿಸಿ ಕಾಯಿಲೆ ಉಂಟಾಗುತ್ತದೆ.ಇದು ದಂತ ಮತ್ತು ಮೂಳೆಗಳ ಮೇಲೆ ಗಂಭೀರವಾದ ಪರಿಣಾಮ ಬೀರಲಿದೆ.ಕುಡಿಯುವ ನೀರಿನ ಈ ರೋಗಹರಡುತ್ತದೆ.ಆದ್ದರಿಂದ ಇದನ್ನ ತಡೆಗಟ್ಟುವ ಸಲುವಾಗಿ ಶುದ್ಧ ಕುಡಿಯುವ ನೀರಿನ್ನ ಬಳಸಿ.ಈ ಕಾಯಿಲೆಗೆ ಸೂಕ್ತವಾದ ಚಿಕಿತ್ಸೆ ಇರುವುದಿಲ್ಲ ಬರದಂತೆ ತಡೆಯುವ ಮಾರ್ಗಗಳನ್ನ ಅಷ್ಟೇ ಅನುಸರಿಸಬೇಕೆಂದು ತಿಳಿಸಿದರು.

ಈ ವೇಳೆಯಲ್ಲಿ ಡಾ.ರಘುನಂದನ್,ಲ್ಯಾಬ್ ಟೆಕ್ನೀಷಿಯನ್ ಅಶೋಕ,ಸಿಎಚ್‌ಓ ರೋಜಾ, ಮಂಜುಳ,ರಾಜಣ್ಣ,ಅನ್ನಪೂರ್ಣಮ್ಮ,ಶ್ರೀನಿವಾಸ ್ ಪ್ರಸಾದ್,ಶೋಬರಾಜ್,ರಾಜಣ್ಣ ಸೇರಿದಂತೆ ಇನ್ನಿತರರು ಇದ್ದರು.

---

# ಅಪಘಾತ ತಡೆಗಟ್ಟುವಂತೆ ಸ್ಟೂಡೆಂಟ್ ವಿಂಗ್‌ನಿಂದ ಅಧಿಕಾರಿಗಳಿಗೆ ಮನವಿ



» ಚಿತ್ರದುರ್ಗ

ಚಿತ್ರದುರ್ಗ ನಗರದ ಹೊರವಲಯದ ರಾಷ್ಟ್ರೀಯ ಹೆದ್ದಾರಿ–13ರಲ್ಲಿ ಮಂಗಳವಾರ ಎಸ್.ಆರ್.ಎಸ್ ಕಾಲೇಜಿನ ಪ್ರಥಮ ವರ್ಷದ ಕಾಮರ್ಸ್ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿದ್ದ ಚೇತನ್ ಅಪಘಾತಕ್ಕಿಡಾಗಿ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಈ ಘಟನೆದ ಅನ್ವಯವಾಗಿ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅವರ ಪಪ್ಪಿಸ್ ಸ್ಟೂಡೆಂಟ್ ವಿಂಗ್ ವತಿಯಿಂದ ಚಿತ್ರದುರ್ಗ ನಗರದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಡಿವೈಎಸ್ಪಿ ಕಚೇರಿ, ಬಡಾವಣೆ ಪೊಲೀಸ್ ಠಾಣೆಗೆ ಪಪ್ಪಿಸ್ ಸ್ಟೂಡೆಂಟ್ ವಿಂಗ್‌ನ ವಿದ್ಯಾರ್ಥಿಗಳು ಭೇಟಿ ನೀಡಿ ಹೆದ್ದಾರಿಗಳಲ್ಲಿ ದಟ್ಟಣೆಯ ವಾಹನಗಳು ಸಂಚರಿಸುವ ರಸ್ತೆಗಳಲ್ಲಿ ಬ್ಯಾರಿಕೇಟ್ ಹಾಗೂ ಸೂಚನಾ ಫಲಕಗಳನ್ನು ಅಳವಡಿಸಬೇಕೆಂದು ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ನಗರ ಪ್ರದೇಶ ಹಾಗೂ ಹೊರವಲಯದಲ್ಲಿ ಅಪಘಾತಗಳು ಹೆಚ್ಚಾಗುತ್ತಿದ್ದು ಇವುಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಸಂಚಾರಿ ಪೊಲೀಸ್ ಇಲಾಖೆಯು ಶಾಲಾ–ಕಾಲೇಜು ಮಟ್ಟಗಳಲ್ಲಿ ಕಾರ್ಯಗಾರವನ್ನು ಮಾಡಿ ಅರಿವು ಮೂಡಿಸುವುದು ಅವಶ್ಯಕವಾಗಿದೆ ಎಂದು ಪಪ್ಪಿಸ್ ಸ್ಟೂಡೆಂಟ್ ವಿಂಗ್‌ನ ವಿದ್ಯಾರ್ಥಿಗಳು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.ಈ ಒಂದು ಸಂದರ್ಭದಲ್ಲಿ ರವೀಂದ್ರ, ಚಿನ್ನು, ಸಲೀಂ, ಜಾಫರ್ ಖಾನ್, ಅಭಾರ್ಹರ್, ಉದಯ್, ಪ್ರಜ್ವಲ್, ಸುದೀಪ್, ಸ್ವಾಮಿ, ಸುಮಂತ್,ಇತ್ತರರು ಇದ್ದರು.

---



**ದಾವಣಗೆರೆ ಉತ್ತರ ವಿಧಾನ ಸಭಾ ಕ್ಷೇತ್ರದ 60 ಅಡಿ ರೋಡ್ ನ ಬೂತ್ ನಂ 152, 201, ರಲ್ಲಿ ಭಾರತೀಯ ಜನತಾ ಪಕ್ಷದ ಮಹಾಸಂಪರ್ಕ ಸದಸ್ಯತ್ವ ಅಭಿಯಾನದ ಅಂಗವಾಗಿ ಮನೆ ಮನೆಗೆ ತೆರಳಿ ಸದಸ್ಯತಾ ಅಭಿಯಾನ ನಡೆಸಲಾಯಿತು.**

---

## ಪ್ರಮುಖ ಸುದ್ದಿ


# ಯಾವುದೇ ಕಾರಣಕ್ಕೂ ರಸ್ತೆ ಅಗಲೀಕರಣವಾಗುವುದಿಲ್ಲ ವರ್ತಕರು ಆತಂಕ ಪಡುವುದು ಬೇಡ: ಅಧ್ಯಕ್ಷೆ ರಾಜೇಶ್ವರಿ

» ಹೊಸದುರ್ಗ

ಪಟ್ಟಣದ ಪುರಸಭಾ ವ್ಯಾಪ್ತಿಯಲ್ಲಿ ಬರುವ ಮುಖ್ಯ ರಸ್ತೆ ಯಾವುದೇ ಕಾರಣಕ್ಕೂ ಅಗಲೀಕರಣವಾಗುವುದಿಲ್ಲ ರಸ್ತೆಯ ಅಗಲೀಕರಣ ಸಂಧರ್ಬ ಬಂದರೆ ರಸ್ತೆಯ ಒಂದು ಕಲ್ಲು ಕೂಡ ಅಲುಗಾಡಲು ಬಿಡುವುದಿಲ್ಲ ಎಂದು ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಅನಂದ್ ವರ್ತಕರಿಗೆ ಭರವಸೆ ನೀಡಿದರು.

ಪಟ್ಟಣದ ಪುರಸಭಾ ಆವರಣದಲ್ಲಿ ಬುಧವಾರ ವರ್ತಕರ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಟ್ಟಣದ ಪ್ರಮುಖ ರಸ್ತೆಯನ್ನ ಅಗಲೀಕರಣ ಮಾಡುವ ವಿಚಾರವನ್ನ ನಾವು ಎಲ್ಲಿಯೂ ಸಹಾ ಪ್ರಸ್ತಾಪಿಸಿಲ್ಲ ಆದರೆ ಸೋಮವಾರ ನಡೆದ ಪುರಸಭಾ ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳ ಕೈ ತಪ್ಪಿನಿಂದ ಅಜೆಂಡಾದಲ್ಲಿ ರಸ್ತೆ ಅಗಲೀಕರಣದ ವಿಷಯ



ಸೇರ್ಪಡೆಯಾಗಿದೆ ಈ ವಿಷಯನ್ನ ಸಭೆಯಲ್ಲಿ ಚರ್ಚಿಸಲಾಗಿತ್ತು ಆದರೆ ನಾವು ರಸ್ತೆ ಅಗಲೀಕರಣ ಮಾಡುವ ವಿಚಾರನ್ನ ಚರ್ಚಿಸದೆ ಈ ವಿಷಯವನ್ನ ಇಲ್ಲಿಗೆ ಕೈ ಬಿಡಿ ಎಂದು ಹೇಳಿದ್ದೇವೆ ಎಂದು ಹೇಳಿದ ಅಧ್ಯಕ್ಷರು ಈ ವಿಚಾರದಲ್ಲಿ ವರ್ತಕರಲ್ಲಿ ಯಾವುದೇ ಗೊಂದಲ್ಲ ಬೇಡ ನಿಮ್ಮ ಪಾಡಿಗೆ ನೀವು ನಿಶ್ಚಿಂತೆಯಿಂದ ವ್ಯಾಪಾರ ವ್ಯವಹಾರ ಮಾಡಿಕೊಳ್ಳಿ ಎಂಬ ಆಶ್ವಾಸನೆಯನ್ನ ನೀಡಿದ ಅವರು ಪ್ರಮುಖ ರಸ್ತೆ ಅಗಲೀಕರಣ ಮಾಡಬಾರದು ಎಂಬ ನಿಮ್ಮ ಮನವಿಯನ್ನ ಸ್ವೀಕರಿಸಿದ್ದೇವೆ ಎಂದರು.

ಸೋಮವಾರ ನಡೆದ ಪುರಸಭಾ ಸಾಮಾನ್ಯ ಸಭೆಯಲ್ಲಿ ರಸ್ತೆ ಅಗಲೀಕರಣ ಎಂಬ ವಿಷಯ ಪ್ರಸ್ತಾಪವಾಗಿದ್ದು ಈ ವಿಚಾರ ವರ್ತಕರಿಗೆ ಮುಟ್ಟಿದ್ದು ಪಟ್ಟಣದ ವರ್ತಕರು ಮಂಗಳವಾರ ತುರ್ತು ಸಭೆಯನ್ನ ಕರೆದು ಯಾವುದೇ ಕಾರಣಕ್ಕೂ ಸಹಾ ರಸ್ತೆ ಅಗಲೀಕರಣ ಮಾಡಬಾರದು ಈಗಿರುವ ರಸ್ತೆಯನ್ನ ಮಾತ್ರ ಅಭಿವೃದ್ಧಿ ಪಡಿಸಬೇಕು ಮತ್ತೆ ರಸ್ತೆ ಅಗಲೀಕರಣ ಮಾಡಿದರೆ ವರ್ತಕರಿಗೆ ತೀರ್ವ ತೊಂದರೆಯಾಗುತ್ತದೆ ಎಂದು ಅಧ್ಯಕ್ಷರಿಗೆ ಮನವಿ ಮಾಡಿದಾಗ ಅಧ್ಯಕ್ಷರು ಯಾವುದೇ ಕಾರಣಕ್ಕೂ ರಸ್ತೆ ಅಗಲೀಕರಣ ಮಾಡುವುದಿಲ್ಲ ಎಂಬ ಭರವಸೆ ನೀಡಿದ್ದಾರೆ ಅವರ ಭರವಸೆಯ ಮೇರೆಗೆ ವರ್ತಕರು ಸಮಾಧಾನದಿಂದ ಸಭೆಯನ್ನ ಅಂತ್ಯಗೊಳಿಸಿದ್ದಾರೆ ಎಂದು ಪುರಸಭಾ ನಾಮ ನಿರ್ಧೇಶನ ಸದಸ್ಯ ಹಾಗೂ ವರ್ತಕ ಹೆಚ್.ಬಿ.ಬ್ರಹ್ಮಪಾಲ್ (ಪಾಪಣ್ಣಿ) ತಿಳಿಸಿದರು.ವರ್ತಕ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ವಿ.ಕುಷ್‌ಕುಮಾರ್ ಮಾತನಾಡಿ ಪಟ್ಟಣದ ಕೆ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣದ ಮುಂಭಾದ ಸುಮಾರು 50 ಮಳಿಗೆಗಳಾಗುವಷ್ಟು ಸ್ಥಳಾವಕಾಶವಿದ್ದು ಈ ಜಾಗದಲ್ಲಿ ಮಳಿಗೆಗಳನ್ನು ನಿರ್ಮಾಣ ಮಾಡಿ ಫುಡ್ ಕೋರ್ಟ್ ನಿರ್ಮಾಣ ಮಾಡಿ ಎಂದು ಮನವಿ ಮಾಡಿದ ಅವರು ಪಟ್ಟನದಲ್ಲಿ ನಾಯಿಗಳ ಮತ್ತು ಕೋತಿಗಳ ಹಾವಳಿ ಹೆಚ್ಚಾಗಿದ್ದು ಇವುಗಳ ಉಪಟಳವನ್ನ ಸಾರ್ವಜನಿಕರಿಗೆ ತಡೆದುಕೊಳ್ಳಲು ಹಾಗುತ್ತಿಲ್ಲ ಕೂಡಲೆ ನಾಯಿ ಮತ್ತು ಕೋತಿಗಳನ್ನ ಹಿಡಿದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿದರು.ಸಭೆಯಲ್ಲಿ ಪುರಸಭಾ ಉಪಾಧ್ಯಕ್ಷೆ ಶ್ರೀಮತಿ ಗೀತಾಗಜೇಂದ್ರ, ಮಾಜಿ ಅಧ್ಯಕ್ಷ ಎಂ.ಶ್ರೀನಿವಾಸ್, ಹಿರಿಯ ಸದಸ್ಯರುಗಳಾದ ದಾಳಿಂಭೆ ಗಿರೀಶ್, ನಾಗರಾಜ್, ಹಲವರಿದ್ದರು.

## ಫಾಸ್ಟ್ ನ್ಯೂಸ್

### ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರ

» **ಚಿತ್ರದುರ್ಗ**

ಭಾರತೀಯ ವಿಜ್ಞಾನ ಸಂಸ್ಥೆ, ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ (ಎಸ್‌ಟಿಐ ಹಬ್) ಹಾಗೂ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ (ಎಸ್‌ಐಡಿ), ಸಹಯೋಗದಲ್ಲಿ ಚಳ್ಳಕೆರೆ ತಾಲ್ಲೂಕಿನ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥಾನ ಆವರಣದಲ್ಲಿ ನವೆಂಬರ್ 6 ರಿಂದ 11 ರವರೆಗೆ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.6 ದಿನಗಳ ತರಬೇತಿಯಲ್ಲಿ ಹೊಸ ಉದ್ಯಮವನ್ನು ಆರಂಭಿಸಲು ಆಸಕ್ತಿ ಇರುವವರಿಗಾಗಿ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲಾಗುವುದು. 18-45 ವರ್ಷದೊಳಗಿನ ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಆಸಕ್ತ ಅಭ್ಯರ್ಥಿಗಳು ಅ.25ರ ಒಳಗೆ ತಮ್ಮ ಹೆಸರನ್ನು ಗಣೇಶ್ ಮೊ. 8970582703, ಕೋಟೇಶ್ ಮೊ.9743675646 ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಬಹುದು. ಅ.28ರೊಳಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಎಸ್.ಸಿ, ಎಸ್.ಟಿ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ 6 ದಿನಗಳ ತರಬೇತಿ ಕಾರ್ಯಗಾರದಲ್ಲಿ ಭಾಗವಹಿಸಬೇಕು. ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಸಂಪೂರ್ಣ ಉಚಿತವಾಗಿ ತರಬೇತಿ ನೀಡಲಾಗುತ್ತಿದ್ದು ಇದರ ಸದಪಯೋಗ ಪಡೆದುಕೊಳ್ಳುವಂತೆ ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ ವ್ಯವಸ್ಥಾಪಕ ಪ್ರತಾಪ್ ಮೂರ್ತಿ ತಿಳಿಸಿದ್ದಾರೆ.

### ತಾಯಿ ಸೂಚನೆಯಂತೆ ನಾಮಪತ್ರ ಸಲ್ಲಿಸಿದ್ದೇನೆ: ಭರತ್ ಬೊಮ್ಮಾಯಿ



» **ಹಾವೇರಿ: ( ಶಿಗ್ಗಾವಿ)**

ನಮ್ಮ ತಾಯಿಯವರ ಸೂಚನೆಯಂತೆ ಒಳ್ಳೆಯ ಮುಹೂರ್ತದಲ್ಲಿ ಇಂದು ಶಿಗ್ಗಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ ಎಂದು ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಹೇಳಿದ್ದಾರೆ.

ಶಿಗ್ಗಾವಿಯಲ್ಲಿಂದು ನಾಮಪತ್ರ ಸಲ್ಲಿಸಿ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಂದೆ ತಾಯಿಯವರ ಆಶೀರ್ವಾದ, ಹಿರಿಯರ ಆಶೀರ್ವಾದ, ಪಕ್ಷದ ವರಿಷ್ಠರ ಆಶೀರ್ವಾದದಿಂದ ನಾನು ಇಂದು ಅಧಿಕೃತವಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದೇನೆ. ನಾಳೆ ಬಹಿರಂಗವಾಗಿ ನಾಮಪತ್ರ ಸಲ್ಲಿಕೆ ಮಾಡಲಿದ್ದೇನೆ. ನಾಳೆ ಪಕ್ಷದ ಅನೇಕ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.ಈ ಚುನಾವಣೆಯಲ್ಲಿ ಜನರ ಬಳಿ ಏನೆಂದು ಮನವಿ ಮಾಡುತ್ತೀರಿ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇದುವರೆಗೂ ನಮ್ಮ ತಂದೆ ಬಸವರಾಜ ಬೊಮ್ಮಾಯಿಯವರಿಗೆ ಆಶೀರ್ವಾದ ಮಾಡುತ್ತಿದ್ದಿರಿ, ಈಗ ನನಗೆ ಆಶೀರ್ವಾದ ಮಾಡಿ ಎಂದು ಜನರಲ್ಲಿ ಮನವಿ ಮಾಡುತ್ತೇನೆ. ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ನಾನು ಬಡವರು, ಯುವಕರು, ಮಹಿಳೆಯರ ಪರವಾಗಿ ಕೆಲಸ ಮಾಡುತ್ತೇನೆ.

ಚುನಾವಣೆಯಲ್ಲಿ ಜಯ ಗಳಿಸಿದರೆ ಅನೇಕ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಮುಂದಿನ ದಿನಗಳಲ್ಲಿ ತಿಳಿಸುವುದಾಗಿ ಹೇಳಿದರು.

### ಅ.25 ರಂದು ನೇರ ನೇಮಕಾತಿ ಸಂದರ್ಶನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ಅ.25ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೊಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಸ್ಟೇಡಿಯಂ ರಸ್ತೆಯಲ್ಲಿನ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಲು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಕರೆ

# ಕಾಲುಬಾಯಿ ರೋಗ ಲಸಿಕಾ ಅಭಿಯಾನ

» **ಚಿತ್ರದುರ್ಗ**

ಸಾಂಕ್ರಾಮಿಕ ಕಾಲುಬಾಯಿ ರೋಗ ಹರಡದಂತೆ ತಡೆಯಲು, ತಪ್ಪದೇ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು ಎಂದು ಜಿ.ಪಂ.ಸಿಇಓ ಎಸ್.ಜೆ ಸೋಮಶೇಖರ್ ಕರೆ ನೀಡಿದರು.

ಚಿತ್ರದುರ್ಗ ತಾಲ್ಲೂಕು ವಿಜಾಪುರ ಗ್ರಾಮದಲ್ಲಿ ಗುರುವಾರ, 6ನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾಲುಬಾಯಿ ರೋಗ ಒಂದು ರಾಸಿನಿಂದ ಇನ್ನೊಂದಕ್ಕೆ ರಾಸುವಿಗೆ ಅತಿ ಬೇಗನೆ ಹರಡುತ್ತದೆ. ರೋಗಗ್ರಸ್ತ ರಾಸುವಿನ ನೇರ ಸಂಪರ್ಕವಷ್ಟೇ ಅಲ್ಲದೇ ಗಾಳಿಯ ಮೂಲಕ ತುಂಬಾ ದೂರದವರೆಗೂ ರೋಗ ಹರಡುತ್ತದೆ. ಆದ್ದರಿಂದ ಸಾರ್ವಜನಿಕರು ಅತಿ ಜಾಗರೂಕರಾಗಿರಬೇಕು. ಕಾಲುಬಾಯಿ ರೋಗ ಲಕ್ಷಣ ಕಂಡುಬಂದ ರಾಸುಗಳನ್ನು ತಕ್ಷಣವೇ ಹಿಂಡಿನಿಂದ ಬೇರ್ಪಡಿಸಬೇಕು. ಜಾತ್ರೆಗಳಿಗೆ ಇವುಗಳನ್ನು ಕೊಂಡಯ್ಯಬಾರದು. ಇದರಿಂದ ಬೇರೆ ಬೇರೆ ಪ್ರದೇಶದ ರಾಸುಗಳಿಗೂ ಕೂಡ ರೋಗ ಶೀಘ್ರವಾಗಿ ಹರಡುತ್ತದೆ ಎಂದು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.ಕಾಲುಬಾಯಿ ರೋಗದ ರೋಗಾಣುಗಳು ಕಲುಷಿತಗೊಂಡ ಮೇವು ಹಾಗೂ ನೀರು, ರೋಗಗ್ರಸ್ತ ರಾಸಿನ ಮೂತ್ರ, ಸಗಣಿ, ಹಾಲಿನ ಮುಖಾಂತರವೂ ಹರಡುತ್ತದೆ. ಆದ್ದರಿಂದ ಆರೋಗ್ಯವಂತ ಜಾನುವಾರಗಳಿಗೆ ರೋಗ ಬರದಂತೆ ತಡೆಯಲು ಮುಂಜಾಗೃತಾ ಕ್ರಮವಾಗಿ ಪ್ರತಿ ವರ್ಷ ತಪ್ಪದೇ ಕಾಲು ಹಾಗೂ ಬಾಯಿರೋಗದ ಲಸಿಕೆ ಹಾಕಿಸಬೇಕು. ರೋಗ ಪೀಡಿತ ಪ್ರದೇಶಗಳಿಂದ ಪಶುಗಳ ಆಹಾರ ಖರೀದಿಸಬಾರದು. ರೋಗಗ್ರಸ್ತ ರಾಸುವಿನ ಹಾಲು ಕುಡಿವ ಕರುವನ್ನು ತಕ್ಷಣ ಬೇರ್ಪಡಿಸಿ ಬೇರೆ ಹಸುವಿನ ಹಾಲ ಕುಡಿಸಬೇಕು. ರೋಗದಿಂದ ಸತ್ತ ದನ ಆಳವಾದ ಗುಂಡಿಯ ತಳಕ್ಕೆ ಸುಣ್ಣ ಹರಡಿ ಕಳೇಬರವನ್ನು ಹಾಕಿ ಮತ್ತೆ ಅದರ ಮೇಲೆ ಸುಣ್ಣಹಾಕಿ ಮುಚ್ಚಬೇಕು. ಇದರಿಂದ ದನಕರುಗಳಿಗೆ ಕಾಲು ಹಾಗೂ ಬಾಯಿ ಜ್ವರದಿಂದ ದೂರವಿಡಲು ಸಾಧ್ಯ ಆದ್ದರಿಂದ ಎಲ್ಲಾ ಗ್ರಾಮದ ಎಲ್ಲಾ ರೈತ ಬಾಂದವರು ತಮ್ಮ ರಾಸುಗಳಿಗೆ ಕಾಲುಬಾಯಿ ಲಸಿಕೆ ಹಾಕಿಸುವುದರ ಮೂಲಕ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್ ಕೋರಿದರು.

ಇದೇ ಸಂದರ್ಭದಲ್ಲಿ ವಿಜಾಪುರ ಮತ್ತು ಓಬವ್ವನಾಗತಿಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ ಲಸಿಕೆ ಕಾರ್ಯಕ್ರಮದ ಪ್ರಗತಿ ಪರಿಶೀಲಿಸಿ, ಈ ಕಾರ್ಯಕ್ರಮದ ಉಪಯುಕ್ತತೆ ಬಗ್ಗೆ ರೈತರಿಗೆ ಮಾಹಿತಿ ನೀಡಿದರು. ಹಾಗೇ ರೈತರೊಂದಿಗೆ ಚರ್ಚಿಸಿದರು. ಸಿರಿಗೆರೆ ಪಶು ಚಿಕಿತ್ಸಾಲಯಕ್ಕೆ ಭೇಟಿ ನೀಡಿ ಲಸಿಕೆ ದಾಸ್ತಾನು, ಶೀತಲಿಕರಣ ನಿರ್ವಹಣೆ ಬಗ್ಗೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಪರಿಶೀಲಿಸಿದರು.ಅ.21 ರಿಂದ ನ.20 ರವರೆಗೆ ಒಂದು ತಿಂಗಳ ಕಾಲ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ, ಚಿತ್ರದುರ್ಗ ಜಿಲ್ಲೆಯ 6 ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ರೈತರ ಮನೆಗಳಿಗೆ ಲಸಿಕೆದಾರರು ಭೇಟಿ ನೀಡಿ ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆ ನೀಡುತ್ತಿದ್ದಾರೆ.





ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡುವ ವೇಳೆ ವಿಜಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸರಸ್ವತಿ ಸ್ವಾಮಿ, ಸದಸ್ಯ ಶಿವಚಂದ್ರನಾಯಕ, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಇಲಾಖೆ ಉಪನಿರ್ದೇಶಕ ಡಾ.ಕುಮಾರ್, ಸಹಾಯಕ ನಿರ್ದೇಶಕಿ. ಡಾ ಜಿ. ಇಂದಿರಾಬಾಯಿ, ಸ್ಥಳೀಯ ಪಶುವೈದ್ಯಾಧಿಕಾರಿಗಳಾದ ಡಾ.ಮಲ್ಲಿಕಾರ್ಜುನ,ನ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ. ಸಿ.ತಿಪ್ಪೇಸ್ವಾಮಿ, ವಿಸ್ತರಣಾಧಿಕಾರಿ ಡಾ. ಮುರಗೇಶ್, ಪಶುವೈದ್ಯಕೀಯ ಪರೀಕ್ಷಕರಾದ ಬಸವರಾಜ್ ಮತ್ತು ಸಿಬ್ಬಂದಿ ಹಾಜರಿದ್ದರು.

### ಇಸ್ರೋ ವಿಜ್ಞಾನಿ ಪಿ.ವಿ.ಎನ್.ಮೂರ್ತಿ ಅಭಿಮತ

## ಇಸ್ರೋಗಿದೆ ವಿಜ್ಞಾನ-ತಂತ್ರಜ್ಞಾನ ಉತ್ತೇಜಿಸುವ ಗುರಿ

» **ದಾವಣಗೆರೆ**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯು ವಿಜ್ಞಾನ ಮತ್ತು ತಂತ್ರಜ್ಞಾನ ಉತ್ತೇಜಿಸುವ ಗುರಿ ಮತ್ತು ಉದ್ದೇಶ ಹೊಂದಿದ್ದು, ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವನೆ ಬೆಳೆಸಿಕೊಂಡು ಬಾಹ್ಯಾಕಾಶ ವಿಜ್ಞಾನ ಕ್ಷೇತ್ರದಲ್ಲಿ ಮಹತ್ತರ ಸಾಧನೆ ಮಾಡಬೇಕೆಂದು ಇಸ್ರೋ ವಿಜ್ಞಾನಿ ಪಿ.ವಿ.ಎನ್.ಮೂರ್ತಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಪಿ.ಜೆ.ಬಡಾವಣೆಯಲ್ಲಿರುವ ಈಶ್ವರಮ್ಮ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಬುಧವಾರ ಇಸ್ರೋ ಮತ್ತು ಶ್ರೀಸತ್ಯಸಾಯಿ ವಿದ್ಯಾವಾಹಿನಿ ಜಂಟಿಯಾಗಿ ಆಯೋಜಿಸಿದ್ದ ಸ್ಪೇಸ್ ಆನ್‌ವೀಲ್ಸ್ ಪ್ರದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ವಿಜ್ಞಾನ ಮತ್ತು ತಂತ್ರಜ್ಞಾನಗಳ ಬಗ್ಗೆ ಹೆಚ್ಚು ಹೆಚ್ಚು ಜ್ಞಾನ ಸಂಪಾದಿಸುವ ಮೂಲಕ ವಿಜ್ಞಾನ ಕ್ಷೇತ್ರದಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು ಸಲಹೆ ನೀಡಿದರು.

ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಜಿಪಂ ಸಿಇಒ ಸುರೇಶ್ ಬಿ.ಇಟ್ನಾಳ್, ನಮ್ಮ ಸಂವಿಧಾನದ ಮೂಲಭೂತ ಕರ್ತವ್ಯಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವುದು ಒಂದಾಗಿದೆ. ಕೇವಲ ಅಧಿಕಾರ, ಹಣ ಗಳಿಸುವುದು ಯಶಸ್ಸಲ್ಲ. ನಾವು ಮಾಡುವ ಕೆಲಸವನ್ನು ಸಂತೋಷವಾಗಿ, ಪರಿಣಾಮಕಾರಿಯಾಗಿ ನಿರ್ವಹಿಸಿದರೆ ಅದೇ ಯಶಸ್ಸು. ವಿದ್ಯಾವಂತರು ಬಹು ರಾಷ್ಟ್ರೀಯ ಕಂಪನಿಗಳಲ್ಲಿ ಉದ್ಯೋಗ ಸಂಪಾದಿಸುವ ಗುರಿಯನ್ನು ಹೊಂದಿದ್ದಾರೆ. ಆದರೆ ಮೂಲ ವಿಜ್ಞಾನವನ್ನು ಅಧ್ಯಯನ ಮಾಡಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಇಸ್ರೋದಲ್ಲಿ ವಿಜ್ಞಾನಿಗಳಾಗಿ ಆಯ್ಕೆಯಾಗಬೇಕು ಎಂದು ಸಲಹೆ ನೀಡಿದರು. ಈಶ್ವರಮ್ಮ ಶಾಲಾಡಳಿತ ಮಂಡಳಿ ಅಧ್ಯಕ್ಷರಾದ ಕೆ.ಆರ್.ಸುಜಾತಕೃಷ್ಣ ಮಾತನಾಡಿ, ಪುಟ್ಟಪರ್ತಿಯ ಶ್ರೀಸತ್ಯಸಾಯಿ ವಿದ್ಯಾವಾಹಿನಿಯ ಸಹಯೋಗದೊಂದಿಗೆ ಈಶ್ವರಮ್ಮ ಶಾಲೆಯಲ್ಲಿ ಸ್ಪೇಸ್ ಆನ್ ವೀಲ್ಸ್ ಪ್ರದರ್ಶನ ಬೃಹತ್ ಕಾರ್ಯಕ್ರಮ ಏರ್ಪಡಿಸಿದ್ದೇವೆ. ಪಿ.ವಿ.ಎನ್.ಮೂರ್ತಿ ಅವರು ಇಸ್ರೋದ ಶ್ರೇಷ್ಠ ವಿಜ್ಞಾನಿಗಳು. ಭಾರತ ದೇಶ ವಿಶ್ವವೇ ಗುರುತಿಸುವ ಇಂತಹ ಮಹಾನ್ ವ್ಯಕ್ತಿಗಳ ಸಾಧನೆಯಿಂದ ವಿಶ್ವ ಗುರುವಾಗಿದೆ. ಸಮಾಜ ನಮಗೇನು ಕೊಟ್ಟಿದೆ ಎಂದು ಕೇಳುವ ಬದಲು ಸಮಾಜಕ್ಕಾಗಿ ನಾವೇನು ಕೊಡುಗೆಯನ್ನು ಕೊಟ್ಟಿದ್ದೇವೆ ಎಂದು ಚಿಂತಿಸಬೇಕೆಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಇಸ್ರೋದ ಹಿರಿಯ ವಿಜ್ಞಾನಿಗಳಾದ ಪಿ.ವಿ.ಎನ್. ಮೂರ್ತಿ ಅವರನ್ನು ಗೌರವಿಸಲಾಯಿತು.



**ಮಕ್ಕಳೊಂದಿಗೆ ಸಂವಾದ:** ಸ್ಪೇಸ್ ಆನ್ ವೀಲ್ಸ್ ಪ್ರದರ್ಶನ ಕಾರ್ಯಕ್ರಮದಲ್ಲಿ ದಾವಣಗೆರೆಯ ವಿವಿಧ ಶಾಲೆಗಳಿಂದ ಸುಮಾರು 3000 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಬೆಳಗ್ಗೆ 9.30 ರಿಂದ ಸಂಜೆ 5 ಗಂಟೆಯವರೆಗೆ ನಡೆದ ಸ್ಪೇಸ್ ಆನ್ ವಿಲ್ಸ್ ಪ್ರದರ್ಶನ ಕಾರ್ಯಕ್ರಮದಲ್ಲಿ ಮಕ್ಕಳು ಇಸ್ರೋ ಪ್ರಾರಂಭವಾದಾಗಿನಿಂದ ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅವುಗಳ ಪ್ರಾಯೋಗಿಕ ಅನ್ವಯಗಳ ಕ್ಷೇತ್ರಗಳಲ್ಲಿ ದೇಶವು ಮಾಡಿದ ಪ್ರಮುಖ ಪ್ರಗತಿಗಳನ್ನು ಸ್ಪೇಸ್ ಆನ್ ವೀಲ್ಸ್ ಸಂಚಾರಿ ಪ್ರದರ್ಶನ ಬಸ್ಸ್‌ನ ಮೂಲಕ ವಿವಿಧ ಸ್ಥಳಗಳಿಗೆ ಪ್ರಯಾಣಿಸಿ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಬಾಹ್ಯಾಕಾಶ ಸಂಶೋಧನೆ ಮತ್ತು ಇಸ್ರೋದ ಸಾಧನೆಗಳ ಬಗ್ಗೆ ಉಪಯುಕ್ತ ಮಾಹಿತಿ ನೀಡಲಾಯಿತು. ನಂತರ ಇಸ್ರೋದ ವಿಜ್ಞಾನಿಗಳೊಂದಿಗೆ ಶಾಲಾ ವಿದ್ಯಾರ್ಥಿಗಳು ಸಂವಾದದ ಮೂಲಕ ವಿಜ್ಞಾನಿಗಳಿಂದ ಮಾಹಿತಿ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಡಿಡಿಪಿಐ ಜಿ.ಕೊಟ್ರೇಶ್, ತಹಸೀಲ್ದಾರ್ ಡಾ.ಅಶ್ವತ್, ಈಶ್ವರಮ್ಮ ಟ್ರಸ್ಟ್ ಅಧ್ಯಕ್ಷರಾದ ಎ.ಆರ್.ಉಷಾರಂಗನಾಥ್, ಕಾರ್ಯದರ್ಶಿ ಜಿ.ಆರ್.ವಿಜಯಾನಂದ್, ಈಶ್ವರಮ್ಮ ಶಾಲಾಡಳಿತ ಮಂಡಳಿ ಖಜಾಂಚಿ ಎ.ಪಿ.ಸುಜಾತ, ಶ್ರೀಸತ್ಯಸಾಯಿ ವಿದ್ಯಾವಾಹಿನಿ ಸಂಸ್ಥೆಯ ಸದಸ್ಯರು ಹಾಗೂ ದಾವಣಗೆರೆ ಖಾಸಗಿ ಶಾಲಾಡಳಿತ ಮಂಡಳಿಯ ಕಾರ್ಯದರ್ಶಿ ಕೆ.ಎಸ್.ಮಂಜುನಾಥ್ ಅಗಡಿ, ಶ್ರೀಸತ್ಯಸಾಯಿ ವಿದ್ಯಾವಾಹಿನಿಯ ಸಂಚಾಲಕರಾದ ಸುಬ್ರಮಣ್ಯ, ಗೌತಮ್, ವೆಂಕಟೇಶ್ ಬಡಿಗೇರ್, ಈಶ್ವರಮ್ಮ ಶಾಲೆಯ ಪ್ರಾಂಶುಪಾಲ ಕೆ.ಎಸ್.ಪ್ರಭುಕುಮಾರ್, ಉಪಪ್ರಾಂಶುಪಾಲರಾದ ಜಿ.ಎಸ್.ಶಶಿರೇಖಾ ಇದ್ದರು.

## ಭ್ರಷ್ಟಾಚಾರ ಕೂಪದಿಂದ ದೂರವಿದ್ದು ಉತ್ತಮ ಜನಸೇವಕರಾಗಿ ಮನ್ನಣೆ ಪಡೆಯಿರಿ: ಲೋಕಾ ಎಸ್ಪಿ ವಾಸುದೇವ




» **ಚಳ್ಳಕೆರೆ**

ಸರ್ಕಾರಿಅಧಿಕಾರಿಗಳುಯಾವುದೇ ಲಂಚಕ್ಕೆ ಆಮಿಷವೊಡ್ಡದೆ, ಲಂಚಸ್ವೀಕರಿಸಿದರೆ ದಕ್ಷತೆ, ಪ್ರಾಮಾಣಿಕತೆಯಿಂದ ಜನರ ಸೇವೆ ಮಾಡುವ ಮೂಲಕ ಎಲ್ಲರಿಗೂ ಮಾದರಿಯಾಗಬೇಕು. ಲಂಚಸ್ವೀಕಾರ ಹಾಗೂ ಲಂಚಕ್ಕೆ ಒತ್ತಾಯ ಕಾನೂನು ಪ್ರಕಾರ ಘೋರಅಪರಾಧ ಇದಕ್ಕೆ ತಕ್ಕಶಿಕ್ಷೆಯನ್ನು ಸರ್ಕಾರಿ ವಿಧಿಸಲಿದೆ ಎಂದು ಚಿತ್ರದುರ್ಗ ಲೋಕಾಯುಕ್ತ ಎಸ್ಪಿ ಎಂ.ವಾಸುದೇವ ತಿಳಿಸಿದರು.

ಅವರು, ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಎಲ್ಲೆಡೆ ಭ್ರಷ್ಟಾಚಾರದ್ದೆ ದೊಡ್ಡ ಸುದ್ದಿಯಾಗಿದೆ. ಲೋಕಾಯುಕ್ತ, ಜನರ ಸಹಕಾರದಿಂದ ಭ್ರಷ್ಟಾಚಾರವನ್ನು ನಿಯಂತ್ರಿಸಲು ಸಾಕಷ್ಟು ಪರಿಶ್ರಮವನ್ನು ವಹಿಸಿದೆ. ಸಾರ್ವಜನಿಕರೂ ಸಹ ಕೆಲಸ ಕಾರ್ಯಗಳಿಗೆ ವಿಳಂಬ ಮಾಡಿ, ಹಣಕ್ಕೆ ಒತ್ತಾಯಿಸಿದರೆ ಕೂಡಲೇ ಲೋಕಾಯುಕ್ತಗಮನಕ್ಕೆತರಬೇಕು ಎಂದರು. ಭ್ರಷ್ಟಾಚಾರದಲ್ಲಿ ಸಿಲುಕಿದ ನೌಕರರಿಗೆ ಶಿಕ್ಷೆಯ ಜೊತೆಗೆ ದಂಡವನ್ನು ಸಹ ವಿಧಿಸಲಾಗುತ್ತದೆ, ಯಾವುದೇ ಅಧಿಕಾರಿ ಭ್ರಷ್ಟಾಚಾರ ರಹಿತವಾಗಿ ಕಾರ್ಯನಿರ್ವಹಿಸುವ ಮೂಲಕ ಜನಮನ್ನಣೆ ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಡಿವೈಎಸ್ಪಿ ಮಂಜುನಾಥ, ತಹಶೀಲ್ದಾರ್ ರೇಹಾನ್‌ಪಾಷ, ಇಒ ಎಚ್.ಶಶಿಧರ, ಎಇಒ ಸಂಪತುಕುಮಾರ್, ಶಿರಸ್ತೇದಾರ್ ಸದಾಶಿವಪ್ಪ, ಕಂದಾಯಾಧಿಕಾರಿ ಲಿಂಗೇಗೌಡ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಗ್ರಾಮ ಆಡಳಿತಾಧಿಕಾರಿಗಳ ಹುದ್ದೆಗೆ ಅ.26, 27 ರಂದು ಸ್ಪರ್ಧಾತ್ಮಕ ಪರೀಕ್ಷೆ, ಅಚ್ಚುಕಟ್ಟಾಗಿ ಪರೀಕ್ಷೆ ನಡೆಸಲು ಸೂಚನೆ

» **ದಾವಣಗೆರೆ**

ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯ ನೇಮಕಾತಿಗೆ ಅಕ್ಟೋಬರ್ 26, 27 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದ್ದು ಕಟ್ಟುನಿಟ್ಟಾಗಿ ಹಾಗೂ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ಅವರು ಗುರುವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಪರೀಕ್ಷಾ ಪೂರ್ವ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಅ.26 ರಂದು 5 ಕೇಂದ್ರಗಳಲ್ಲಿ ಮತ್ತು ಅ.27 ರಂದು 38 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಅವರು ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳಿಗೆ ಸೂಚಿಸಿದರು.

ಅ.26 ರಂದು 5 ಪರೀಕ್ಷಾ ಕೇಂದ್ರಗಳಲ್ಲಿ 2090 ಅಭ್ಯರ್ಥಿಗಳು, ಅ.27 ರಂದು 17920 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅ.26 ರಂದು ಮಧ್ಯಾಹ್ನ 2.30 ರಿಂದ ಸಂಜೆ 4.30 ರವರೆಗೆ ಕಡ್ಡಾಯ ಕನ್ನಡ ಭಾಷೆ ಅ.27 ರಂದು ಬೆಳಿಗ್ಗೆ 10-30ರಿಂದ 12.30ರವರೆಗೆ ಪತ್ರಿಕೆ-1 ಹಾಗೂ ಮಧ್ಯಾಹ್ನ 2-30ರಿಂದ ಸಂಜೆ 4.30 ರವರೆಗೆ ಪತ್ರಿಕೆ-2ರ ಪರೀಕ್ಷೆಗಳು ನಡೆಯಲಿವೆ ಎಂದು ಅವರು ತಿಳಿಸಿದರು.




ಕೇಂದ್ರದೊಳಗೆಅಭ್ಯರ್ಥಿಗಳುಯಾವುದೇ ಎಲೆಕ್ಟ್ರಾನಿಕ್ ಡಿವೈಸ್, ಮೈಕ್ರೋಫೊನ್ ಇನ್ನಿತರ ಉಪಕರಣ ಬಳಸದಂತೆ ನಿಗಾವಹಿಸಬೇಕು. ಪರೀಕ್ಷಾ ಹಿಂದಿನ ದಿನ ಸಿಸಿಟಿವಿ ಕ್ಯಾಮರಾ, ಕೇಂದ್ರದೊಳಗೆ ಪ್ರವೇಶ ಮಾಡುವಾಗ ಸಂಪೂರ್ಣ ತಪಾಸಣೆ ಮಾಡಿ ಭಾವಚಿತ್ರಗಳನ್ನು ಮೂಲ ದಾಖಲೆಗಳೊಂದಿಗೆ ಪರೀಕ್ಷೆ ಮಾಡಲು ಸೂಚಿಸಿ ಪ್ರಶ್ನೆ ಪತ್ರಿಕೆಯನ್ನು ಅಭ್ಯರ್ಥಿಗಳಿಗೆ ನೀಡುವಾಗ ಮತ್ತು ಉತ್ತರ ಪತ್ರಿಕೆ ವಾಪಾಸ್ ಪಡೆಯುವುದನ್ನು ಹಾಗೂ ಖಜಾನೆ ಕಳುಹಿಸುತ್ತಿರುವ ಕುರಿತು ವಿಡಿಯೋ ಮಾಡಬೇಕೆಂದರು.

ಪರೀಕ್ಷಾ ಕೊಠಡಿಗಳಲ್ಲಿ ಸಾಕಷ್ಟು ಗಾಳಿ ಬೆಳಕಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಸೇರಿದಂತೆ ಅಗತ್ಯ ಕ್ರಮ ವಹಿಸಬೇಕು. ಪರೀಕ್ಷೆಗಳಲ್ಲಿ ಯಾವುದೇ ಲೋಪವಾಗದಂತೆ ಕರ್ತವ್ಯ ನಿರ್ವಹಿಸಬೇಕು. ಪುರುಷ ಅಭ್ಯರ್ಥಿಗಳು ಪೂರ್ಣ ತೋಳಿನ ಶರ್ಟ್ ಧರಿಸಬಾರದು, ಮಹಿಳೆಯರು ಮಂಗಲ್ಯಸರವನ್ನು ಬಿಟ್ಟು ಬೇರೆ ಯಾವುದೇ ರೀತಿಯ ಆಭರಣಗಳನ್ನು ಧರಿಸಬಾರದು. ಕಿವಿಯಲ್ಲಿ ಹೇರ್ ಪೋ[illegible]ಗಳ ಹಾಕಿರುವುದನ್ನು ಪರೀಕ್ಷಿಸುವಂತೆ ಜಿಲ್ಲಾ ಆರೋಗ್ಯಧಿಕಾರಿಗಳಿಗೆ ಸೂಚಿಸಿದರು. ಯಾವುದೇ ಕಾರಣಕ್ಕೂ ತಮಗೆ ವಹಿಸಿದ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಅಭ್ಯರ್ಥಿಗಳ ಆಧಾರ್ ಕಾರ್ಡ್ ತಪಾಸಣೆ ನಡೆಸಿ ಖಚಿತಪಡಿಸಿಕೊಳ್ಳಬೇಕು. ಮೊಬೈಲ್, ಕ್ಯಾಲಕುಲೇಟರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸದೇ ಇರುವುದು ಖಚಿತ ಪಡಿಸಿಕೊಳ್ಳಬೇಕು ಪರೀಕ್ಷಾ ಕೇಂದ್ರಗಳಲ್ಲಿ ಅಧಿಕೃತವಾಗಿ ನೇಮಕವಾದ ಸಿಬ್ಬಂದಿಗಳಿಗೆ ಮಾತ್ರ ಕರ್ತವ್ಯ ನಿರ್ವಹಿಸುವಂತೆ ನೋಡಿಕೊಳ್ಳಬೇಕು ಅವರು ಗುರುತಿನ ಚೀಟಿ ಹೊಂದಿರಬೇಕು. ಪಾರದರ್ಶಕ ಹಾಗೂ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಂಜುನಾಥ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ, ಮಾರ್ಗಾಧಿಕಾರಿಗಳು, ಅಧೀಕ್ಷಕರು, ಸ್ಥಾನಿಕ ನಿರೀಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ವೀಕ್ಷಕರು ಉಪಸ್ಥಿತರಿದ್ದರು.

# ನೀರಾವರಿ ಪದ್ಧತಿಗಳ ಅಳವಡಿಕೆಯಿಂದ ನೀರಿನ ಸದ್ಬಳಕೆ: ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ್

» ಚಿತ್ರದುರ್ಗ

ವೈಜ್ಞಾನಿಕವಾಗಿ ತುಂತುರು ಮತ್ತು ಹನಿ ನೀರಾವರಿ ಪದ್ದತಿಗಳ ಅಳವಡಿಕೆಯಿಂದ ಕೃಷಿಯಲ್ಲಿ ಶೇ.30–40ರಷ್ಟು ನೀರಿನ ಉಳಿತಾಯವಾಗುತ್ತದೆ. ಇದರಿಂದ ನೀರಿನ ಸದ್ಬಳಕೆ ಮಾಡಿಕೊಳ್ಳಬಹುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ಹೇಳಿದರು.



ಹಿರಿಯೂರುಬಬ್ಬೂರುಫಾರಂನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಮಂಗಳವಾರ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ದೇವಸಮುದ್ರ ಹೋಬಳಿ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆ ಕುರಿತು ಆಯೋಜಿಸಲಾದ ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತುಂತುರು ಹಾಗೂ ಹನಿ ನಿರಾವರಿ ಅಳಡಿಕೆಯಿಂದ ವಿದ್ಯುಚ್ಛಕ್ತಿಯ ಉಳಿತಾಯ, ಕೂಲಿ ಆಳುಗಳ ಉಳಿತಾಯ, ಸಮಯದ ಉಳಿತಾಯ, ಕಳೆಗಳ ನಿರ್ವಹಣೆ ಮತ್ತು ರೋಗಗಳ ಹರಡುವಿಕೆಯನ್ನು ತಡೆಗಟ್ಟಬಹುದು. ಹನಿ ನೀರಾವರಿ ಪದ್ಧತಿಯಲ್ಲಿ ರಸಾವರಿ ಬಳಸಿ ರಸಗೊಬ್ಬರ ನೀಡುವುದರಿಂದರಸಗೊಬ್ಬರದಸಮರ್ಪಕ ಬಳಕೆಯಿಂದ ವ್ಯವಸಾಯದ ಖರ್ಚು ಕಡಿಮೆಯಾಗಿ ಶೇ.20 ರಿಂದ 30 ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವೆಂದರು. ಮಳೆಯಾಶ್ರಿತ ಪ್ರದೇಶದಲ್ಲಿ ರೈತರು ಬಿದ್ದ ನೀರನ್ನು ಇಂಗಿಸಲು ಕಂದಕ ಬದುಗಳ ನಿರ್ಮಾಣ ಮಾಡಬೇಕು ಮತ್ತು ಕೃಷಿ ಹೊಂಡದಲ್ಲಿ ನೀರು ಸಂಗ್ರಹಣೆ ಮಾಡಿ ಬೆಳೆಯ ಸಂದಿಗ್ದ ಹಂತದಲ್ಲಿ ನೀರು ಹಾಯಿಸಲು ಅನೂಕೂಲವಾಗುತ್ತದೆ.

ಕೃಷಿ ಇಲಾಖೆಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ಶೇ 90 ಸಹಾಯಧನದಲ್ಲಿ ಸ್ಪಿಂಕ್ಲರ್ ಸೆಟ್ ಪಡೆಯಲು ಸಂಬಂಧಪಟ್ಟ ರೈತಸಂಪರ್ಕ ಕೇಂದ್ರಗಳಲ್ಲಿ ಅರ್ಜಿಯನ್ನು ಸಲ್ಲಿಸಿ ಸದರಿ ಯೋಜನೆಯ ಅನುಕೂಲ ಪಡೆದು ಕೊಳ್ಳಬಹುದೆಂದರು ಎಂದರು.

ತೋಟಗಾರಿಕೆ ಮಹಾ ವಿದ್ಯಾಲಯದ ಇಂಜಿನಿಯರಿಂಗ್ ವಿಭಾಗದ ಸಹ ಪ್ರಾಧ್ಯಪಕ ಡಾ. ರಾಜಶೇಖರ ಡಿ ಭಾರಕೇರ ಮಾತನಾಡಿ, ಭೂಮಿಯ ಮೇಲೆ ಶೇ 70 ರಷ್ಟು ನೀರಿದ್ದರೂ ಶೇ 2% ಮಾತ್ರ ಕೃಷಿ,ಕೈಗಾರಿಕೆ ಮತ್ತು ದಿನ ನಿತ್ಯ ಬಳಕೆಗೆ ಯೋಗ್ಯವಾಗಿದ್ದು ವೈಜ್ಞಾನಿಕವಾಗಿ ಈ ಶುದ್ದ ನೀರಿನ ಮಿತ ಹಾಗೂ ಸಮರ್ಥ ಬಳಕೆ ತಮ್ಮೆಲ್ಲೇರ ಜವಬ್ದಾರಿಯಾಗಿದೆಂದರು, ಹನಿ ನೀರಾವರಿ ಮತ್ತು ಸ್ಪಿಂಕ್ಲರ್ ಘಟಕಗಳ ಉಪಯೋಗದಿಂದ ಇದು ಸಾಧ್ಯವೆಂದರು ಹಾಗೂ ರೈತರು ನೀರು ಮತ್ತು ಮಣ್ಣಿನ ಸಂರಕ್ಷಣೆಗೆ ಕೃಷಿ ತ್ಯಾಜ್ಯಗಳ ಹೊದಿಕೆ, ಹಸಿರೆಲೆ ಗೊಬ್ಬರಗಳ ಬಳಕೆಗೆ ಒತ್ತು ನೀಡಬೇಕೆಂದರು.

ದಾವಣಗೆರೆ ವೆಂಕಟೇಶ್ವರ ಅಗ್ರಿ ಮತ್ತು ಹಾರ್ಟಿ ಸಲೂಷನ್ಸ್ ಬಕಂಪನಿ ಪ್ರತಿನಿಧಿಯಾದ ಅನಿಲ್ ಕುಮಾರ್ ಕ್ಷೇತ್ರ ಮಟ್ಟದಲ್ಲಿ ಸ್ಪಿಂಕ್ಲರ್‌ಸೆಟ್ ಘಟಕ ಅಳವಡಿಕೆ ವಿಧಾನ ಮತ್ತು ಅವುಗಳ ಸಮರ್ಪಕ ನಿರ್ವಹಣೆ ಕುರಿತು ಮಾಹಿತಿ ಮತ್ತು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿಕೊಟ್ಟರು.

ದಾವಣಗೆರೆ ಪ್ರೀಮಿಯರ್ ಇರಿಗೇಶನ್ ಅಡ್ರಿಟೆಕ್ ಕಂಪನಿಯ ಏರಿಯಾ ಮ್ಯಾನೇಜರ್ ಆದ ಶ್ರೀ ರವಿಕುಮಾರ್ ರವರು ಹನಿ ನೀರಾವರಿ ಘಟಕಗಳನ್ನು ಕ್ಷೇತ್ರ ಮಟ್ಟದಲ್ಲಿ ಅಳವಡಿಸುವ ವಿನ್ಯಾಸ ಹಾಗೂ ನಿರ್ವಹಣೆಯ ವಿಧಾನವನ್ನು ತಿಳಿಸಿದರು. ಹನಿ ನೀರಾವರಿ ಪದ್ಧತಿಯಲ್ಲಿ ವಿವಿಧ ಫಿಲ್ಟರ್‌ಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡುತ್ತಾ, ದೈನಂದಿನ ಫಿಲ್ಟರ್‌ಗಳಲ್ಲಿ ಡ್ರಂಮ್‌ನ ಕವಾಟಗಳನ್ನು ತೆರೆಯುವುದು, ವಾರಕ್ಕೊಮ್ಮೆ ಮೆಶ್ ಮತ್ತು ಡಿಶ್ ಫಿಲ್ಟರ್ ಗಾಗಿ ಫಿಲ್ಟರ್ ಎಲಿಮೆಂಟ್ ತೆರೆಯುವಿಕೆ ಹಾಗೂ ತಿಂಗಳಿಗೊಮ್ಮೆ ಹೈಡ್ರೋಸೈಕ್ಲೋನ್ ಫಿಲ್ಟರ್‌ನ ಸಂಗ್ರಹ ಕೊಠಡಿಯಲ್ಲಿ ಸೈಡ್ ಕ್ಯಾಪ್ ತೆರೆಯುವುದು ಬಹಳ ಮುಖ್ಯವೆಂದರು. ಎಲ್ಲಾ ಡ್ರಿಪ್ ಲ್ಯಾಟರಲ್‌ಗಳ ಫ್ಲಶಿಂಗ್‌ನ್ನು ಪ್ರತಿ 15 ದಿನಗಳಿಗೊಮ್ಮೆ ಮಾಡಬೇಕು. ಹನಿ ನೀರಾವರಿ ಘಟಕದ ನಿರ್ದಿಷ್ಟ ಅವಧಿಯ ಕಾರ್ಯಾಚರಣೆಯ ನಂತರ ಉಪ್ಪು ಶೇಖರಣೆ ಸಂಭವಿಸುತ್ತದೆ. ಸಾಧನದ ಹೊರ ಮೇಲ್ಮೈಯಲ್ಲಿ ಉಪ್ಪು ಶೇಖರಣೆಯನ್ನು ನಾವು ಗಮನಿಸಿದಾಗ ಆಮ್ಲ ಚಿಕಿತ್ಸೆಯನ್ನು ಮಾಡಬೇಕಾಗುತ್ತದೆ. ಆಸಿಡ್ ಚಿಕಿತ್ಸೆಗಾಗಿ 35% ಕೇಂದ್ರೀಕೃತ ಹೈಡ್ರೋಕ್ಲೋರಿಕ್ ಆಮ್ಲವನ್ನು ಬಳಸಬೇಕು. ಆಸಿಡ್ ಚಿಕಿತ್ಸೆಯನ್ನು ಕೈಗೊಳ್ಳುವಾಗ ಕಣ್ಣುಗಳು ಮತ್ತು ಚರ್ಮದೊಂದಿಗೆ ಆಮ್ಲದ ಸಂಪರ್ಕವು ಅಪಾಯಕಾರಿಯಾದ್ದರಿಂದ ದಯವಿಟ್ಟು ಎಲ್ಲಾ ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕೆಂದರು. ಹನಿ ನೀರಾವರಿ ವ್ಯವಸ್ಥೆಯಲ್ಲಿ ಕೀಟ, ಅಳಿಲು ಮತ್ತು ಇಲಿಗಳ ಹಾನಿಯನ್ನು ತಡೆಗಟ್ಟಲು ನೀರಾವರಿ ಮುಗಿದಾಗ ಅಥವಾ ಬೆಳೆ ಮುಗಿದಾಗ ಅಥವಾ ಕೊಯ್ಲು ಮಾಡುವಾಗ ಹನಿನೀರಾವರಿ ಕೊಳವೆಗಳನ್ನು ಹೊಲದಲ್ಲಿ ಬೀಡದೆ ಅವುಗಳನ್ನು ಸರಿಯಾಗಿ ನೆರಳಿನಲ್ಲಿ ಸಂಗ್ರಹಿಸಿ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಬೇಕೆಂದರು. ಹನಿ ನೀರಾವರಿ ವ್ಯವಸ್ಥೆಯಲ್ಲಿ ನೀರಿನ ಗುಣಮಟ್ಟದ ಮಾನದಂಡಗಳು ಮತ್ತು ಹನಿ ನೀರಾವರಿ ವ್ಯವಸ್ಥೆಯಲ್ಲಿ ಸೂಕ್ತವಾದ ನೀರಿನಲ್ಲಿ ಕರಗುವ ರಸಗೊಬ್ಬರಗಳ ಕುರಿತು ಮಾಹಿತಿ ನೀಡಿದರು. ನಂತರ ಸ್ಪಿಂಕ್ಲರ್ ನೀರಾವರಿ ವ್ಯವಸ್ಥೆಗಳ ನಿರ್ವಹಣೆ ಮತ್ತು ಕಾರ್ಯಾಚರಣೆ ಬಗ್ಗೆ ಮಾಹಿತಿ ನೀಡುತ್ತಾ, ಪೈಪ್‌ಗಳು ಒಂದು ವಾರಕ್ಕಿಂತ ಹೆಚ್ಚು ಕಾಲ ಬಳಕೆಯಲ್ಲಿಲ್ಲದಿದ್ದಾಗ, ರಬ್ಬರ್ ಸೀಲಿಂಗ್ ರಿಂಗ್ ಗಳನ್ನು ಹೊರತೆಗೆದು ಅವುಗಳನ್ನು ತೊಳೆಯಬೇಕು ಮತ್ತು ಅವುಗಳನ್ನು ಸುರಕ್ಷಿತ ಸ್ಥಳದಲ್ಲಿ ನೇತಾಡುವ ಚೀಲದಲ್ಲಿ ಇರಿಸಬೇಕು. ಪೈಪ್‌ಲೈನ್‌ಗಳಲ್ಲಿ ತಿರುವು ಇದ್ದಲ್ಲಿ, ಯಾವಾಗಲೂ ಬೆಂಡ್, ಟೀ ಮುಂತಾದ ಫಿಟ್ಟಿಂಗ್‌ಗಳನ್ನು ಬಳಸಿ. ಸರಿಯಾದ ಮತ್ತು ಏಕರೂಪದ ನೀರಾವರಿಗಾಗಿ, ನೀರಾವರಿ ಶಿಫ್ಟ್ ಪೂರ್ಣಗೊಂಡನಂತರ ಎಂಡ್‌ಕ್ಯಾಪ್ ಅನ್ನು ತೆರೆಯಿರಿ. ಇದರಿಂದ ಪೈಪ್‌ಲೈನ್‌ನಲ್ಲಿರುವ ನೀರನ್ನು ಹೊರ ಹಾಕಲು ಸಹಕಾರಿಯಾಗುತ್ತದೆ. ಸ್ಪಿಂಕ್ಲರ್ ವ್ಯವಸ್ಥೆಯ ಕಾರ್ಯಾಚರಣೆಯ ಸಮಯವು ಮಣ್ಣಿನ ಪ್ರಕಾರ ಮತ್ತು ಬೆಳೆಯ ಬೆಳವಣಿಗೆಯ ಹಂತವನ್ನು ಅವಲಂಬಿಸಿರುತ್ತದೆ. ಬೆಳೆಗಳ ಹೂ ಬಿಡುವ ಹಂತದಲ್ಲಿ ಸ್ಪಿಂಕ್ಲರ್ ವ್ಯವಸ್ಥೆಯನ್ನು ಬಳಸಬಾರದು ಎಂದು ರೈತರಿಗೆ ಮಾಹಿತಿ ನೀಡಿದರು.

ತರಬೇತಿಯಲ್ಲಿ ಮೊಳಕಾಲ್ಮೂರು ತಾಲ್ಲೂಕಿನ ಆಸಕ್ತ 85 ಜನ ರೈತಬಾಂಧವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅ.25 ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ಅ.25ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೊಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಸ್ಟೇಡಿಯಂ ರಸ್ತೆಯಲ್ಲಿನ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಹೊಳಲ್ಕೆರೆ: ಅ.29, 30ರಂದು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ವತಿಯಿಂದ ಹೊಳಲ್ಕೆರೆ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಇದೇ ಅಕ್ಟೋಬರ್ 29 ಮತ್ತು 30ರಂದು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಪುನರ್ ನಿಗಧಿಪಡಿಸಲಾಗಿದೆ.

The prohibition of Employment as Manual Scavengers and Their Rehabilitation Act, 2013 ರ 14 ಅನ್ವಯ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು 2024ರ ಅ.8 ಮತ್ತು 9ರಂದು ಸಮೀಕ್ಷಾ ಕ್ಯಾಂಪ್‌ಗಳನ್ನು ಹಮ್ಮಿಕೊಂಡಿರುವ ಕುರಿತು ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಲಾಗಿತ್ತು.ಆದರೆಗ್ರಾಮೀಣಾಭಿವೃದ್ಧಿಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳು ಅ.4 ರಿಂದ ರಾಜ್ಯಾದ್ಯಂತ ಮುಷ್ಕರದಲ್ಲಿ ಭಾಗಿಯಾದ ಕಾರಣ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು. ಪ್ರಯುಕ್ತ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಇದೇ ಅ.29 ಹಾಗೂ 30ರಂದು ಪುನರ್ ನಿಗಧಿಪಡಿಸಿದ್ದು, ಸ್ವಯಂ ಘೋಷಿತ ಅರ್ಜಿಗಳನ್ನು ಪಡೆದು ಮುಂದಿನ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ಮಾಸಿಕ ಗಮಕ ಸಂಭ್ರಮ

» ಚಿತ್ರದುರ್ಗ

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘವು ಪ್ರತಿ ತಿಂಗಳು ನಡೆಸುತ್ತಿರುವ ಮಾಸಿಕ ಗಮಕ ಸಂಭ್ರಮದ15 ನೇ ಕಾರ್ಯಕ್ರಮವು ಅ.27ರ ಭಾನುವಾರದಂದು ಸಂಜೆ 6ಗಂಟೆಯಿಂದ ನಗರದ ಜೆ.ಸಿ.ಆರ್.ಗಣಪತಿ ದೇವಸ್ಥಾನದ ಆವರಣದಲ್ಲಿನ ರಂಗಮಂಟಪದಲ್ಲಿ ಆಯೋಜಿಸಿರುವುದಾಗಿ ಎಂದು ಸಂಘದ ಪ್ರಕಟಣೆ ತಿಳಿಸಿದೆ.ಅಂದು ಗಮಕಿಗಳು, ಕಲಾವಿದರಾದ ಎಂ.ಆರ್.ಸತ್ಯನಾರಾಯಣ ವಾಚನ ಮಾಡಲಿದ್ದು, ಬೆಂಗಳೂರಿನ ಶ್ರೀ ಟಿ.ಸುಬ್ರಹ್ಮಣ್ಯಭಟ್ ಗಮಕಿಗಳು ಇವರು ವ್ಯಾಖ್ಯಾನ ಮಾಡಲಿದ್ದಾರೆ. ಜೈಮಿನಿ ಭಾರತದ 'ಬಕದಾಲ್ಭ್ಯಮುನಿಯ ಕಥಾಭಾಗದ ಆಯ್ದ ವೃತ್ತಾಂತ ನಡೆಸಿಕೊಡುವರು. ಮುಖ್ಯ ಅತಿಥಿಗಳಾಗಿ,ರಂಗ ನಿರ್ದೇಶಕರಾದ ಕೆ.ಪಿ.ಎಂ. ಗಣೇಶಯ್ಯ ಭಾಗವಹಿಸಲಿದ್ದಾರೆ. ಜೆಸಿಆರ್ ಗಣಪತಿ ದೇವಾಲಯದ ಸಮಿತಿಯವರು ಸಹಯೋಗ ಒದಗಿಸಿದ್ದಾರೆ.

### ಸುಸ್ಥಿರ ಕೃಷಿ ತರಬೇತಿ

» ದಾವಣಗೆರೆ

ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಾಡಜ್ಜಿ, ಇಲ್ಲಿ ಅಕ್ಟೋಬರ್ 29 ರಂದು ಜಿಲ್ಲೆಯ ರೈತರಿಗೆ ಸುಸ್ಥಿರ ಕೃಷಿ–ಸ್ವಾವಲಂಭಿ ಜೀವನಕ್ಕಾಗಿ ನೂತನ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಪ್ರಗತಿ ಪರ ರೈತರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಲಿಕೆರೆಯ ವಿಶ್ವೇಶ್ವರ ಹೆಚ್ ಸಜ್ಜನ್, ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ದೇವರಾಜ್ ಟಿ.ಎನ್. ಬೇಸಾಯ ತಜ್ಞರಾದ ಮಲ್ಲಿಕಾರ್ಜುನ ಬಿ.ಓ, ತೋಟಗಾರಿಕಾ ತಜ್ಞರಾದ ಬಸವನಗೌಡ ಎಂ.ಜಿ ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು. ಸುಸ್ಥಿರ ಕೃಷಿಗೆ ಪೂರಕವಾಗಿ ಇಲಾಖೆಯಿಂದ ದೊರೆಯುವ ಯೋಜನೆಗಳ ಕುರಿತು ಮಾಹಿತಿಯನ್ನು ಉಪ ಕೃಷಿ ನಿರ್ದೇಶಕರಾದ ತಿಪ್ಪೇಸ್ವಾಮಿ. ಆರ್ ತರಬೇತಿಯಲ್ಲಿ ವಿಷಯ ಮಂಡಿಸುವರು. ತರಬೇತಿಯಲ್ಲಿ ಭಾಗವಹಿಸಲು 35 ರೈತರಿಗೆ ಮಾತ್ರ ಅವಕಾಶವಿದೆ. ಆಸಕ್ತ ರೈತ, ರೈತ ಮಹಿಳೆಯರು ಅ.26 ರೊಳಗಾಗಿ ಮೊ.ಸಂಖ್ಯೆ: 9844295795, 9901640184 ಗೆ ಸಂಪರ್ಕಿಸಿ ನೋಂದಾಯಿಸಲು ರೈತರು ಕಡ್ಡಾಯವಾಗಿ ಎಫ್‌ಐಡಿ ಯೊಂದಿಗೆ ಹಾಜರಾಗಬೇಕೆಂದು ನಿರ್ದೇಶಕರು ತಿಳಿಸಿದ್ದಾರೆ.

## ಪತ್ರಿಕಾವರದಿ ಫಲಶ್ರುತಿ : ದೊಡ್ಡ ಉಳ್ಳಾರ್ತಿ ಶಾಲೆಗೆ ಭೇಟಿ ನೀಡಿದ ಅಧಿಕಾರಿಗಳ ತಂಡ

# ಶಾಲೆ ರಿಪೇರಿಗೆ ಹಣಕ್ಕೆ ಪ್ರಸ್ತಾವನೆ: ಡಿಡಿಪಿಐ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ದೊಡ್ಡ ಉಳ್ಳಾರ್ತಿ ಸರ್ಕಾರಿ ಉನ್ನತ್ತೀಕರಿಸಿದಪ್ರಾಥಮಿಕಶಾಲೆಯ ಕೊಠಡಿಗಳು ಮಳೆ ನೀರಿನಿಂದ ಸೋರುತ್ತಿರುವ ಬಗ್ಗೆ ಪತ್ರಿಕೆ ವಿಸ್ತಾರ ವರದಿ ಪ್ರಕಟಿಸಿತ್ತು. ವರದಿ ಪ್ರಕಟವಾದ ಬೆನ್ನಹಿಂದೆಯೇ ಕ್ಷೇತ್ರದ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮತ್ತು ಅಧಿಕಾರಿಗಳ ತಂಡ ದೌಡಾಯಿಸಿ ಶಾಲಾ ಕೊಠಡಿಗಳ ದುಸ್ಥಿತಿಯನ್ನು ಪರಿಶೀಲಿಸಿದರು.



ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಗ್ರಾಮೀಣ ಭಾಗದ ಶಾಲೆಗಳ ಸಮಸ್ಯೆಗಳ ಬಗ್ಗೆ ಹೆಚ್ಚು ಗವಮನಹರಿಸಲಾಗುತ್ತಿದೆ. ನಗರಪ್ರದೇಶದಲ್ಲಿ ಸಹ ಶಾಲಾ ಕೊಠಡಿಗಳ ದುರಸ್ಥಿತಿ ಕಾರ್ಯ ಕೈಗೊಳ್ಳಲು ಹಿರಿಯ ಅಧಿಕಾರಿಗಳಿಗೆ ಮನವಿಮಾಡಿಕೊಳ್ಳಲಾಗಿದೆ. ಈಗಾಗಲೇ ಇಂಜಿನಿಯರ್‌ಗಳ ತಂಡ ಭೇಟಿ ನೀಡಿ ಶೀಘ್ರದಲ್ಲೇ ತುರ್ತು ರಿಪೇರಿಕಾರ್ಯವನ್ನು ಕೈಗೊಳ್ಳಲಿದೆ ಎಂದರು. ಪ್ರಸ್ತುತ ಈ ಶಾಲೆಯಲ್ಲಿ 5 ಆರ್‌ಸಿಸಿ, 6 ಸಿಮೆಂಟ್‌ಶೀಟ್ ಹೊಂದಿದ ಕೊಠಡಿಗಳಿವೆ. ನಿರೀಕ್ಷೆಗೂ ಮೀರಿ ಈ ಬಾರಿ ಹೆಚ್ಚು ಮಳೆಯಾಗಿದೆ. ಸ್ಥಳೀಯ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಮನವಿ ಮಾಡಿ ಶಾಲಾ ಆವರಣದಲ್ಲಿ ನಿಂತಿರುವನೀರನ್ನು ಬೇರೆಡೆ ಸಾಗಿಸುವ ಬಗ್ಗೆ ಮನವಿ ಮಾಡಿದೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಪೆದ್ದಯ್ಯ ಮಾಹಿತಿ ನೀಡಿ, ಪ್ರತಿನಿತ್ಯ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ಬಗ್ಗೆ ಗಮನಹರಿಸುವಂತೆ ಪತ್ರಿಕೆ ಮೂಲಕ ಮನವಿ ಮಾಡಿದ್ದೆ. ಈ ಬಗ್ಗೆ ಈಗಾಗಲೇ ಅಧಿಕಾರಿಗಳಿಗೂ ಮಾಹಿತಿ ನೀಡಿದ್ದೆ. ಕೊಠಡಿಗಳ ಸೋರಿಕೆಯಿಂದ ವಿದ್ಯಾರ್ಥಿಗಳು ಕುಳಿತು ಪಾಠ ಆಲಿಸಲು ಸಾಧ್ಯವಿಲ್ಲ. ತುರ್ತು ರಿಪೇರಿ ಅಗತ್ಯವಿದೆ ಎಂದರು.

## ಕನ್ನಡ ಜ್ಯೋತಿ ರಥಯಾತ್ರೆ, ದಾವಣಗೆರೆಯಲ್ಲಿ ಅದ್ದೂರಿ ಸ್ವಾಗತ



» ದಾವಣಗೆರೆ

ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡ ಜ್ಯೋತಿ ಹೊತ್ತ ಕನ್ನಡ ರಥಯಾತ್ರೆ ರಾಜ್ಯಾದ್ಯಂತ ಸಂಚರಿಸುತ್ತಿದ್ದು ಅಕ್ಟೋಬರ್ 24 ರಂದು ದಾವಣಗೆರೆಯಲ್ಲಿ ರಥಕ್ಕೆ ಆದ್ದೂರಿಯಾಗಿ ಸ್ವಾಗತಿಸಲಾಯಿತು. ಈ ರಥಯಾತ್ರೆ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಾಮದೇವಪ್ಪ, ಕನ್ನಡಪರ ಸಂಘಟನೆಯ ಮುಖಂಡರು, ರೈತ ಕಾರ್ಮಿಕ ಸಂಘಟನೆ ಮುಖಂಡರು, ಶಾಲಾ, ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಇತರರು ಇದ್ದರು.

## ಪ್ರಮುಖ ಸುದ್ದಿ

# ನವೆಂಬರ್ ಮಾಹೆಯನ್ನು ಪಾಲಿಕೆಯಿಂದ ಕನ್ನಡ ಸ್ವಚ್ಛತಾ ಮಾಸವನ್ನಾಗಿ ಆಚರಿಸಲಾಗುವುದು; ಮೇಯರ್ ಚಮನ್‌ಸಾಬ್

» ದಾವಣಗೆರೆ

ಮಹಾನಗರ ಪಾಲಿಕೆಯಿಂದ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ನವೆಂಬರ್ ತಿಂಗಳನ್ನು ಕನ್ನಡ ಸ್ವಚ್ಛತಾ ಮಾಸವನ್ನಾಗಿ ಆಚರಿಸಲಾಗುವುದು ಎಂದು ಮಹಾನಗರ ಪಾಲಿಕೆಯ ಮಹಾಪೌರ ಚಮನ್‌ಸಾಬ್ ಕೆ. ತಿಳಿಸಿದರು.

ಮಹಾನಗರ ಪಾಲಿಕೆಯ ಮೇಯರ್ ಕಾರ್ಯಾಲಯದಲ್ಲಿ ಗುರುವಾರ ಆಯೋಜಿಸಿದ್ದ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮಹಾನಗರ ಪಾಲಿಕೆಯ ಎಲ್ಲಾ ವಾರ್ಡುಗಳಲ್ಲಿ ಸ್ವಚ್ಛತಾ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು. ಇದಕ್ಕೆ ಬೇಕಾಗುವ ಸಲಕರಣೆಗಳು, ವಾಹನಗಳು ಮತ್ತು ಮಾನವ ಸಂಪನ್ಮೂಲವನ್ನು ಹೆಚ್ಚುವರಿಯಾಗಿ ತೆಗೆದುಕೊಂಡು ಎಲ್ಲಾ ವಾರ್ಡುಗಳಲ್ಲಿ ಸ್ವಚ್ಛತೆ ಮಾಡಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಕಸ ಸಂಗ್ರಹಣೆ ವಾಹನಗಳು ಮನೆ ಮನೆಗೆ ಬಂದು ಹಸಿ ಕಸ, ಒಣ ಕಸವನ್ನು ಸಂಗ್ರಹಿಸುತ್ತಿದ್ದು, ಕೆಲವು ನಾಗರಿಕರು ರಾತ್ರಿ ವೇಳೆ ಎಲ್ಲೆಂದರಲ್ಲಿ ಕಸ ಹಾಕುವುದು ಕಂಡುಬಂದಲ್ಲಿ ಆರೋಗ್ಯ ನಿರೀಕ್ಷಕರು ಮನೆ ಬಾಗಿಲಿಗೆ ಬಂದು ದಂಡ ವಿಧಿಸಿ ಕಸ ಹಾಕಿದವರ ಫೋಟೋಸಹಿತ ಪತ್ರಿಕೆಗಳಲ್ಲಿ ಪ್ರಚುರಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ತಿಮಾಲೀಕರುಗಳು ಆಸ್ತಿ ತೆರಿಗೆ, ನೀರಿನ ತೆರಿಗೆ, ಯುಜಿಡಿ ಶುಲ್ಕ, ಉದ್ದಿಮೆ ಪರವಾನಿಗೆ ಶುಲ್ಕವನ್ನು ಮಹಾನಗರ ಪಾಲಿಕೆಗೆ ಪಾವತಿಸಬೇಕು. ಒಂದು ವೇಳೆ ಪಾವತಿಸದೇ ಇದ್ದಲ್ಲಿ ಪಾಲಿಕೆಯ ಅಧಿಕಾರಿಗಳೇ ಭೇಟಿ ನೀಡಿ ಸ್ಥಳದಲ್ಲಿಯೇ ದಂಡದೊಂದಿಗೆ ತೆರಿಗೆ, ಶುಲ್ಕ ವಸೂಲಿಗೆ ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

ನವೆಂಬರ್ ಮಾಹೆಯಿಂದ ವಾರ್ಡ್‌ಗಳಲ್ಲಿ ಇ–ಆಸ್ತಿ ಅಂದೋಲನ ಪ್ರಾರಂಭ ಮಾಡಲಾಗುವುದು. ಎಲ್ಲಾ ಆಸ್ತಿ ಮಾಲೀಕರುಗಳು ಆಸ್ತಿ ತೆರಿಗೆ ಪಾವತಿಸಿದ ಚಲನ್, ಇ.ಸಿ. ಮನೆಗೆ ಸಂಬಂಧಿಸಿದ ದಾಖಲೆಗಳನ್ನು ಸಿದ್ದವಾಗಿಟ್ಟುಕೊಳ್ಳಬೇಕು. ಪಾಲಿಕೆಯಿಂದ ಆಂದೋಲನದ ವೇಳಾಪಟ್ಟಿಯನ್ನು ಪ್ರಕಟಪಡಿಸಿದ ನಂತರ ನಿಗದಿತ ದಿನಾಂಕಗಳಂದು ಆಯಾ ವಾರ್ಡುಗಳಲ್ಲಿ ಸ್ಥಳದಲ್ಲಿಯೇ ಇ–ಸ್ವತ್ತು ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನಗಳಲ್ಲಿ ಬೆಳೆದಿರುವ ಗಿಡಗಂಟಿಗಳನ್ನು ತಾವೇ ಸ್ವಚ್ಛಗೊಳಿಸಿಕೊಳ್ಳಬೇಕು. ತಪ್ಪಿದಲ್ಲಿ ಮಹಾನಗರಪಾಲಿಕೆಯಿಂದ ಸ್ವಚ್ಛಗೊಳಿಸಿ ಅವರ ಆಸ್ತಿ ತೆರಿಗೆಯಲ್ಲಿ ಸೇರಿಸಲಾಗುವುದು ಎಂದು ತಿಳಿಸಿದರು.

ಜಲಸಿರಿ ಯೋಜನೆ 14 ವಲಯಗಳಲ್ಲಿ ಪ್ರಾರಂಭಿಸಿ 24ಥ7 ಮಾದರಿಯಲ್ಲಿ ನೀರು ಪೂರೈಕೆ ಮಾಡಲಾಗುತ್ತಿದ್ದು ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಬೇಕು. ಹೆಚ್ಚಿನ ಬಿಲ್ ಬಂದಲ್ಲಿ, ನಳ ಸಂಪರ್ಕ ಮತ್ತು ತೊಂದರೆಯಾದರೆ ದೂ.ಸಂ. 9036544419 ಗೆ ಕರೆ ಮಾಡಬೇಕೆಂದು ಮನವಿ ಮಾಡಿದರು.

ಮಹಾನಗರ ಪಾಲಿಕೆ ಪ್ರಧಾನ ಕಚೇರಿಯಲ್ಲಿ ಸಹಾಯ ಮೇಜು ಪ್ರಾರಂಭಿಸುತ್ತಿದ್ದು, ಸಾರ್ವಜನಿಕರು ಏನಾದರೂ ಕುಂದು ಕೊರತೆಗಳಿದ್ದಲ್ಲಿ ಅಥವಾ ಪಾಲಿಕೆಯಿಂದ ನೀಡಲಾಗುವ ಸೇವೆಗಳಲ್ಲಿ ಏನಾದರೂ ವ್ಯತ್ಯಯ ಉಂಟಾದಲ್ಲಿ ಹೆಲ್ಪ್ ಡೆಸ್ಕ್ ಅನ್ನು ಸಂಪರ್ಕಿಸುವುದು ಎಂದು ತಿಳಿಸಿದರು.

ಈಗ ಶೇ.50 ರಷ್ಟು ಮಾತ್ರ ಕಂದಾಯ ಪಾವತಿ ಮಾಡುತ್ತಿದ್ದಾರೆ. ಇನ್ನೂ ಕೆಲವರು 4 ಅಥವಾ 5 ವರ್ಷ ಬಿಟ್ಟು ಕಂದಾಯ ಪಾವತಿ ಮಾಡುವುದಕ್ಕೆ ಬಂದಾಗ ಬಡ್ಡಿ ಜಾಸ್ತಿಯಾಗಿದೆ ಎಂದು ಪಾಲಿಕೆಯಲ್ಲಿ ಜಗಳ ಮಾಡುತ್ತಿದ್ದಾರೆ. ಆದ್ದರಿಂದ ಪ್ರತಿಯೊಬ್ಬರು ಸರಿಯಾದ ಸಮಯಕ್ಕೆ ಕಂದಾಯ ಪಾವತಿ ಮಾಡಿದರೆ, ಯಾರಿಗೂ ಹೆಚ್ಚು ಬರುವುದಿಲ್ಲ ಎಂದು ತಿಳಿಸಿದರು.

ಪಾಲಿಕೆಯಲ್ಲಿ 400 ಪೌರಕಾರ್ಮಿಕರು ಕೊರತೆಯಿದ್ದು. ಮುಂದಿನ ದಿನಗಳಲ್ಲಿ ಖಾಲಿ ಇರುವ ಪೌರ ಕಾರ್ಮಿಕರನ್ನು ಮಾಡಿ ಭರ್ತಿಮಾಡಲು ಅನುಮತಿ ಪಡೆಯಲಾಗುವುದು ಎಂದು ತಿಳಿಸಿದರು.

ಪಾಲಿಕೆ ಆಯುಕ್ತೆ ರೇಣುಕಾ ಮಾತನಾಡಿ ಮಹಾನಗರ ಪಾಲಿಕೆಯ ಹಳೆಯ ಪ್ರಾಪರ್ಟಿಗಳ ಪಾರ್ಕ್ ಜಾಗ, ಮಾಲೀಕರು ಬೇರೆ ಕಡೆ ವಾಸವಾಗಿರುವುದನ್ನು ತಿದ್ದುಪಡಿ ಮಾಡಿ ಮ್ಯಾನುವಲ್ ನಮೂನೆ–3 ಕೊಟ್ಟು ಸಬ್‌ರಿಜಿಸ್ಟ್ರಲ್ಲಿ ರಿಜಿಸ್ಟರ್ ಆಗಿ ಖಾತೆಗೆ ಬರುತ್ತಿರುವ ಪ್ರಕರಣಗಳು ಸಂಖ್ಯೆ ಜಾಸ್ತಿ ಇದ್ದವು, ಇದಕ್ಕೆ ಸಂಬಂಧಪಟ್ಟಂತೆ ಎಲ್ಲಾ ರೀತಿಯ ಕಡಿವಾಣ ಹಾಕಿ, ಎಲ್ಲಿಯೂ ದಾಖಲೆಗಳನ್ನು ತಿದ್ದುಪಡಿ ಮಾಡಲಿಲ್ಲ ಎಂದು ತಿಳಿಸಿದರು.

ಖಾತೆಗೆ ಸಂಬಂಧಪಟ್ಟಂತೆ ಪಾರ್ಕ್‌ಗಳ ಜಾಗಗಳನ್ನು ಗುರುತಿಸಿ ಅದರ ಖಾತೆಗಳನ್ನು ರದ್ದು ಮಾಡಿ ಪಾಲಿಕೆ ವಶಕ್ಕೆ ತೆಗೆದುಕೊಳ್ಳಲಾಗಿದೆ. ಹಾಗೂ ಮಹಾನಗರ ಪಾಲಿಕೆಯಲ್ಲಿ ಪ್ರತಿಯೊಬ್ಬರೂ ಕೂಡ ಸಾಲಿನಲ್ಲಿ ನಿಂತು ಟ್ಯಾಕ್ಸ್ ಕಟ್ಟುವ ವ್ಯವಸ್ಥೆ ಇತ್ತು, ಇದನ್ನು ಆನ್ಲೈನ್ ಮೂಲಕ ಕಟ್ಟುವಂತೆ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಉಪಮೇಯರ್ ಸೋಗಿ ಶಾಂತಕುಮಾರ್ ಹಾಗೂ ಇನ್ನಿತರರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T